ಸಂಪುಟ : 11 ಸಂಚಿಕೆ: 96 ಪುಟ : 4+2 ಬೆಲೆ: 3.00 ಶನಿವಾರ ಮೇ 16 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 96 Pages : 4+2 Price : 3.00 Saturday May 16 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನಾಳೆ ಹಳೆ ವಿದ್ಯಾರ್ಥಿಗಳ ಸ್ನೇಹ ಸಮ್ಮಿಲನ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮೀಪದ ಅಬ್ಬಿಗೇರಿ ಗ್ರಾಮದ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಹಳೆಯ ವಿದ್ಯಾರ್ಥಿಗಳ ಸ್ನೇಹ ಸಮ್ಮಿಲನ ಹಾಗೂ ಗುರುವಂದನಾ ಕಾರ್ಯಕ್ರಮವನ್ನು ಮೇ 17ರಂದು ಬೆಳಗ್ಗೆ 10 ಗಂಟೆಗೆ ಬಾಲಕರ ಸರ್ಕಾರಿ ಮಾದರಿ ಕೇಂದ್ರ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ಅಬ್ಬಿಗೇರಿಯ ಬಾಲಕರ ಸರ್ಕಾರಿ ಮಾದರಿ ಕೇಂದ್ರ ಶಾಲೆ, ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಹೆಣ್ಣುಮಕ್ಕಳ ಶಾಲೆ ಹಾಗೂ ಶ್ರೀ ಅನ್ನದಾನ ವಿಜಯ ಪ್ರೌಢಶಾಲೆಯ ಹಳೆಯ ವಿದ್ಯಾರ್ಥಿಗಳು ಈ ಕಾರ್ಯಕ್ರಮವನ್ನು ಆಯೋಜಿಸಿದ್ದಾರೆ.

ಕಾರ್ಯಕ್ರಮದಲ್ಲಿ ವಿವಿಧ ಶಾಲೆಗಳಲ್ಲಿ ಸೇವೆ ಸಲ್ಲಿಸಿದ ಶಿಕ್ಷಕರಿಗೆ ಗುರುವಂದನೆ ಸಲ್ಲಿಸಿ ಸನ್ಮಾನಿಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ವಸತಿ ಶಾಲೆ ಪ್ರವೇಶಕ್ಕೆ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

2026–27ನೇ ಶೈಕ್ಷಣಿಕ ಸಾಲಿಗೆ ಶಿರಹಟ್ಟಿ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆಯ ವಸತಿ ಶಾಲೆಗಳ ಖಾಲಿ ಸ್ಥಾನಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಶಿಗ್ಲಿಯ ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ ವಸತಿ ಶಾಲೆ (ಪರಿಶಿಷ್ಟ ಜಾತಿ)ಯ 1ರಿಂದ 5ನೇ ತರಗತಿ ಹಾಗೂ ನವೇಭಾವನೂರಿನ ಮಹರ್ಷಿ ಶ್ರೀ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆ (ಪರಿಶಿಷ್ಟ ವರ್ಗ)ಯ 1ರಿಂದ 7ನೇ ತರಗತಿವರೆಗಿನ ಖಾಲಿ ಸ್ಥಾನಗಳಿಗೆ ವಿದ್ಯಾರ್ಥಿಗಳ ಪ್ರವೇಶ ನಡೆಯಲಿದೆ.

ಪ್ರವೇಶ ಬಯಸುವ ವಿದ್ಯಾರ್ಥಿಗಳು ಕಚೇರಿ ವೇಳೆಯಲ್ಲಿ ಸಂಬಂಧಿಸಿದ ವಸತಿ ಶಾಲೆ ಅಥವಾ ಸಮಾಜ ಕಲ್ಯಾಣ ಇಲಾಖೆಯ ಕಾರ್ಯಾಲಯದಿಂದ ಅರ್ಜಿ ಪಡೆದು ಅಗತ್ಯ ದಾಖಲೆಗಳನ್ನು ಲಗತ್ತಿಸಿ, ಸಂಬಂಧಿತ ಮುಖ್ಯೋಪಾಧ್ಯಾಯರು ಅಥವಾ ಪ್ರಾಂಶುಪಾಲರಿಂದ ದೃಢೀಕರಿಸಿ ಶಿರಹಟ್ಟಿ ಸಮಾಜ ಕಲ್ಯಾಣ ಇಲಾಖೆಯ ಕಾರ್ಯಾಲಯಕ್ಕೆ ಸಲ್ಲಿಸಬೇಕು.

ಸೀಟುಗಳ ಲಭ್ಯತೆ ಹಾಗೂ ಅರ್ಹತೆ ಆಧಾರದ ಮೇಲೆ ಆಯ್ಕೆ ಸಮಿತಿಯ ಮೂಲಕ ಪ್ರವೇಶ ಕಲ್ಪಿಸಲಾಗುವುದು. ಅರ್ಜಿ ಸಲ್ಲಿಸಲು ಜೂನ್ 18 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ, ಶಿರಹಟ್ಟಿ ಸಂಪರ್ಕಿಸಬಹುದಾಗಿದೆ. ದೂರವಾಣಿ ಸಂಖ್ಯೆ: 08487–295097 ಎಂದು ಪ್ರಕಟಣೆ ತಿಳಿಸಿದೆ.

ವಿದ್ಯಾರ್ಥಿಯ ಖಂಖಿಖ ಸಂಖ್ಯೆ, ಜಾತಿ ಮತ್ತು ಆದಾಯ ಪ್ರಮಾಣಪತ್ರ, ವಿದ್ಯಾರ್ಥಿ ಹಾಗೂ ಪೋಷಕರ ಆಧಾರ್ ಕಾರ್ಡ್ ಪ್ರತಿ, 3 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ, ಹಿಂದಿನ ತರಗತಿಯ ಅಂಕಪಟ್ಟಿ, ಮೊಬೈಲ್ ಸಂಖ್ಯೆ ಹಾಗೂ ಪಡಿತರ ಚೀಟಿ ಝೆರಾಕ್ಸ್ ಪ್ರತಿಯನ್ನು ಅರ್ಜಿಯೊಂದಿಗೆ ಸಲ್ಲಿಸಬೇಕು.

### ಅರ್ಹ ಫಲಾನುಭವಿಗಳಿಗೆ ಯೋಜನೆ ತಲುಪಿಸಲು ಅಧಿಕಾರಿಗಳಿಗೆ ಬಿ.ಬಿ. ಅಸೂಟಿ ಕಟ್ಟುನಿಟ್ಟಿನ ಸೂಚನೆ

# ಪಂಚ ಗ್ಯಾರಂಟಿ ಸೌಲಭ್ಯಕ್ಕೆ ವಿಳಂಬ ಬೇಡ

**■ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ತಲುಪಿಸುವಲ್ಲಿ ಯಾವುದೇ ರೀತಿಯ ವಿಳಂಬವಾಗಬಾರದು. ಈ ನಿಟ್ಟಿನಲ್ಲಿ ಸಂಬಂಧಿತ ಅಧಿಕಾರಿಗಳು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಸೂಚಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರ ನಡೆದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪಂಚ ಗ್ಯಾರಂಟಿ ಯೋಜನೆಗಳು ಬಡಜನರನ್ನು ಆರ್ಥಿಕವಾಗಿ ಸಬಲರನ್ನಾಗಿಸುವ ಉದ್ದೇಶ ಹೊಂದಿದ್ದು, ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಅಧಿಕಾರಿಗಳು ವಿಶೇಷ ಆಸಕ್ತಿ ವಹಿಸಬೇಕು ಎಂದರು.

ಜಿಲ್ಲೆಯ ಎಲ್ಲಾ ತಾಲೂಕುಗಳ ಬಸ್ ನಿಲ್ದಾಣಗಳಲ್ಲಿ ಸ್ವಚ್ಛತೆ ಕಾಪಾಡುವ ಜೊತೆಗೆ ಕುಡಿಯುವ ನೀರು, ಶೌಚಾಲಯ ಸೇರಿದಂತೆ ಮೂಲಭೂತ ಸೌಲಭ್ಯಗಳು ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಪಂಚ ಗ್ಯಾರಂಟಿ ಯೋಜನೆಗಳ ಕುರಿತು ಸಾರ್ವಜನಿಕರಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವ ಉದ್ದೇಶದಿಂದ ಪ್ರತಿ ತಾಲೂಕಿನಲ್ಲಿ ಗ್ಯಾರಂಟಿ ಶಿಬಿರ ಹಾಗೂ ಸಮಾವೇಶಗಳನ್ನು ಆಯೋಜಿಸಲು ನಿರ್ಧರಿಸಲಾಗಿದೆ ಎಂದು ಬಿ.ಬಿ. ಅಸೂಟಿ ತಿಳಿಸಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯ ಅಶೋಕ ಮಂದಾಲಿ ಮಾತನಾಡಿ, ಗೃಹಲಕ್ಷ್ಮಿ ಯೋಜನೆಯಿಂದ ಯಾವುದೇ ಅರ್ಹ ಫಲಾನುಭವಿ ವಂಚಿತರಾಗಬಾರದು. ಫಲಾನುಭವಿಗಳಿಗೆ ಹಣ ತಲುಪಿರುವ ಕುರಿತು ಸಮೀಕ್ಷೆ ನಡೆಸಬೇಕು ಎಂದು ಸೂಚಿಸಿದರು.

ಅನ್ನಭಾಗ್ಯ ಯೋಜನೆಯ ಸೌಲಭ್ಯ ತಲುಪುವಲ್ಲಿ ವಿಳಂಬವಾಗದಂತೆ ಕ್ರಮ ವಹಿಸಬೇಕು. ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣಗಳಲ್ಲಿ ಸಿಸಿ ಕ್ಯಾಮೆರಾ ಅಳವಡಿಸಬೇಕು ಎಂದು ಅವರು ಒತ್ತಾಯಿಸಿದರು.

ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಮಾತನಾಡಿ, ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನ ಕುರಿತು ಅಧಿಕಾರಿಗಳು ನಿಯಮಿತ ಪರಾಮರ್ಶೆ ನಡೆಸಬೇಕು. ಯೋಜನೆಗಳ ಸೌಲಭ್ಯ ನಿಗದಿತ ಅವಧಿಯೊಳಗೆ ಅರ್ಹರಿಗೆ ತಲುಪುವಂತೆ ಕ್ರಮ ಕೈಗೊಳ್ಳಬೇಕು ಎಂದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ದೀಪಕ್ ಲಮಾಣಿ ಮಾತನಾಡಿ, ಶಕ್ತಿ ಯೋಜನೆಯ ಸೌಲಭ್ಯ ಪಡೆಯುವ ಮಹಿಳೆಯರಿಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಉಪಾಧ್ಯಕ್ಷರು, ಸದಸ್ಯರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.



> "ಗ್ಯಾರಂಟಿ ಯೋಜನೆಗಳು ಕಾಗದದಲ್ಲಲ್ಲ, ಜನರ ಬದುಕಿನಲ್ಲಿ ಕಾಣಿಸಬೇಕು."
> – ಬಿ.ಬಿ. ಅಸೂಟಿ,

### ಯೋಜನೆಗಳ ಪ್ರಗತಿ ವಿವರ

**ಗೃಹಲಕ್ಷ್ಮಿ ಯೋಜನೆ**

ಫೆಬ್ರವರಿ 2026ರವರೆಗೆ 2,61,860 ಅರ್ಜಿಗಳು ನೋಂದಣಿಯಾಗಿದ್ದು, ಅವುಗಳಲ್ಲಿ 2,52,843 ಅರ್ಜಿಗಳಿಗೆ ಮಂಜೂರಾತಿ ದೊರೆತಿದೆ.

**ಶಕ್ತಿ ಯೋಜನೆ**

1–6–2023ರಿಂದ 3–5–2026ರವರೆಗೆ ಜಿಲ್ಲೆಯಲ್ಲಿ 15,57,32,562 ಮಹಿಳಾ ಪ್ರಯಾಣಿಕರು ಉಚಿತ ಪ್ರಯಾಣ ಸೌಲಭ್ಯ ಬಳಸಿದ್ದು, ₹528.54 ಕೋಟಿ ಆದಾಯ ದಾಖಲಾಗಿದೆ.

**ಅನ್ನಭಾಗ್ಯ ಯೋಜನೆ**

ಫೆಬ್ರವರಿ 2025ರಿಂದ ಎಪ್ರಿಲ್ 2026ರವರೆಗೆ 5.81 ಲಕ್ಷ ಕ್ವಿಂಟಲ್ ಹೆಚ್ಚುವರಿ ಅಕ್ಕಿ ವಿತರಣೆ ಮಾಡಲಾಗಿದೆ.

**ಯುವನಿಧಿ ಯೋಜನೆ**

ಜನವರಿ 2024ರಿಂದ ಮೇ 2026ರವರೆಗೆ 8075 ಅರ್ಜಿಗಳು ಸ್ವೀಕೃತವಾಗಿದ್ದು, 6712 ಫಲಾನುಭವಿಗಳಿಗೆ ₹19.72 ಕೋಟಿ ಡಿಬಿಟಿ ಮೂಲಕ ವರ್ಗಾವಣೆ ಮಾಡಲಾಗಿದೆ.

**ಗೃಹ ಜ್ಯೋತಿ ಯೋಜನೆ**

ಎಪ್ರಿಲ್ 2026ರವರೆಗೆ 2,74,543 ಸ್ಥಾವರಗಳು ನೋಂದಣಿಯಾಗಿದ್ದು, ಶೇ. 98.51 ಪ್ರಗತಿ ಸಾಧಿಸಲಾಗಿದೆ.

### ಮನೆ ಕಳ್ಳತನ ತಡೆಗೆ ಧಾರವಾಡ ಜಿಲ್ಲೆಯಲ್ಲಿ 'ಲಾಕ್ಡ್ ಹೌಸ್ ಬೀಟ್ ಸಿಸ್ಟಮ್' ಜಾರಿ

# ಕಳ್ಳರ ಮೇಲೆ ಪೊಲೀಸರ ಡಿಜಿಟಲ್ ಕಣ್ಗಾವಲು..!

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಧಾರವಾಡ ಜಿಲ್ಲೆಯಲ್ಲಿ ರಾತ್ರಿ ಸಮಯದಲ್ಲಿ ನಡೆಯುವ ಕಳ್ಳತನ ಹಾಗೂ ಸ್ವತ್ತು ಅಪರಾಧ ಪ್ರಕರಣಗಳನ್ನು ತಡೆಗಟ್ಟಲು ಧಾರವಾಡ ಜಿಲ್ಲಾ ಪೊಲೀಸ್ ಇಲಾಖೆ ವಿನೂತನ 'ಲಾಕ್ಡ್ ಹೌಸ್ ಬೀಟ್ ಸಿಸ್ಟಮ್' (ಐ.ಊ.ಃ.ಖ) ಜಾರಿಗೆ ತಂದಿದೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ ಆರ್ಯ ಅವರು ಈ ಕುರಿತು ಮಾಹಿತಿ ಹೊಂದಿದ ಬಿತ್ತಿಪತ್ರವನ್ನು ಶುಕ್ರವಾರ ತಮ್ಮ ಕಚೇರಿಯಲ್ಲಿ ಬಿಡುಗಡೆ ಮಾಡಿದರು.

ಕಲಘಟಗಿ, ಅಳ್ನಾವರ, ಕುಂದಗೋಳ ಪಟ್ಟಣ ಪಂಚಾಯಿತಿ ವ್ಯಾಪ್ತಿ ಹಾಗೂ ಅಣ್ಣಿಗೇರಿ ಮತ್ತು ನವಲಗುಂದ ಪುರಸಭೆ ವ್ಯಾಪ್ತಿಯಲ್ಲಿ ಈ ವ್ಯವಸ್ಥೆಯನ್ನು ಜಾರಿಗೆ ತರಲಾಗುತ್ತಿದೆ.

ಸಾರ್ವಜನಿಕರು ಪ್ರವಾಸ, ಮದುವೆ, ದೇವಸ್ಥಾನ, ಜಾತ್ರೆಗಳು ಸೇರಿದಂತೆ ವಿವಿಧ ಸಮಾರಂಭಗಳಿಗಾಗಿ ಬೇರೆ ಊರುಗಳಿಗೆ ತೆರಳುವ ಸಂದರ್ಭದಲ್ಲಿ ಮನೆಗೆ ಬೀಗ ಹಾಕಿ ಹೋಗುವ ಮೊದಲು ಧಾರವಾಡ ಪೊಲೀಸ್ ಇಲಾಖೆ ಆರಂಭಿಸಿರುವ 'ಲಾಕ್ಡ್ ಹೌಸ್ ಬೀಟ್ ಸಿಸ್ಟಮ್' ಅನ್ನು ಬಳಸಿಕೊಳ್ಳಬೇಕು ಎಂದು ಎಸ್‌ಪಿ ಮನವಿ ಮಾಡಿದ್ದಾರೆ.

ಮನೆ ಬಿಟ್ಟು ತೆರಳುವ ಸಾರ್ವಜನಿಕರು ತಮ್ಮ ಹೆಸರು, ವಿಳಾಸ, ಸಂಪರ್ಕ ಸಂಖ್ಯೆ ಹಾಗೂ ಗೂಗಲ್ ಲೊಕೇಶನ್ ಮಾಹಿತಿಯನ್ನು ಪೊಲೀಸ್ ಕಂಟ್ರೋಲ್ ರೂಮ್ ಸಹಾಯವಾಣಿ ಸಂಖ್ಯೆ 8277968343ಕ್ಕೆ ಸಂದೇಶ ಅಥವಾ ವಾಟ್ಸ್‌ಆ್ಯಪ್ ಮೂಲಕ ಕಳುಹಿಸಬೇಕು ಎಂದು ತಿಳಿಸಿದ್ದಾರೆ.

ಈ ಮಾಹಿತಿಯ ಆಧಾರದ ಮೇಲೆ ಸಂಬಂಧಿತ ಪೊಲೀಸ್ ಠಾಣೆಗಳ ಸಿಬ್ಬಂದಿ ಮನೆಗಳ ಮೇಲೆ ನಿಗಾ ವಹಿಸಲಿದ್ದು, ಕಳ್ಳತನದಂತಹ ಪ್ರಕರಣಗಳನ್ನು ತಡೆಯಲು ಕ್ರಮ ಕೈಗೊಳ್ಳಲಾಗುವುದು ಎಂದು ಅವರು ವಿವರಿಸಿದರು.

ಧಾರವಾಡ ಜಿಲ್ಲಾ ಪೊಲೀಸ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸುರಕ್ಷತೆ ದೃಷ್ಟಿಯಿಂದ ಜಾರಿಗೆ ತರಲಾಗಿರುವ ಈ ವಿನೂತನ ವ್ಯವಸ್ಥೆಯನ್ನು ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




> "ಸಾರ್ವಜನಿಕರು ಮನೆಗೆ ಬೀಗ ಹಾಕಿ ತೆರಳುವಾಗ ಪೊಲೀಸರಿಗೆ ಮಾಹಿತಿ ನೀಡಿದರೆ ಕಳ್ಳತನ ಪ್ರಕರಣಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ಸಾಧ್ಯ."
> – ಗುಂಜನ್ ಆರ್ಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

### 268 ಪ್ರಕರಣ ದಾಖಲು; ₹40.51 ಲಕ್ಷ ದಂಡ ವಸೂಲಿ

## ಅಬಕಾರಿ ಅಕ್ರಮಗಳಿಗೆ ಜಿಲ್ಲೆಯಲ್ಲಿ ಬ್ರೇಕ್

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಅಬಕಾರಿ ನಿಯಮ ಉಲ್ಲಂಘನೆ, ಅಕ್ರಮ ಮದ್ಯ ಮಾರಾಟ ಹಾಗೂ ಮಾದಕ ವಸ್ತುಗಳ ವಿರುದ್ಧ ಅಬಕಾರಿ ಇಲಾಖೆ ಕಠಿಣ ಕ್ರಮ ಮುಂದುವರಿಸಿದ್ದು, ಜುಲೈ–2025ರಿಂದ ಎಪ್ರಿಲ್–2026ರವರೆಗೆ ವಿವಿಧ ಪ್ರಕರಣಗಳಲ್ಲಿ ಲಕ್ಷಾಂತರ ರೂಪಾಯಿ ದಂಡ ವಸೂಲಿ ಮಾಡಲಾಗಿದೆ.

ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಬಗೆಯ ಅಬಕಾರಿ ಸನ್ನದುಗಳ ವಿರುದ್ಧ ಸನ್ನದು ಷರತ್ತು ಉಲ್ಲಂಘನೆಗೆ ಸಂಬಂಧಿಸಿದಂತೆ (ಬಿಎಲ್‌ಸಿ) ಒಟ್ಟು 268 ಪ್ರಕರಣಗಳನ್ನು ದಾಖಲಿಸಿಕೊಂಡು ₹40.51 ಲಕ್ಷ ದಂಡ ವಸೂಲಿ ಮಾಡಲಾಗಿದೆ. ಇದೇ ಅವಧಿಯಲ್ಲಿ 4 ಸನ್ನದುಗಳನ್ನು ಅಮಾನತುಗೊಳಿಸಲಾಗಿದೆ ಎಂದು ಅಬಕಾರಿ ಇಲಾಖೆ ಪ್ರಕಟಣೆ ತಿಳಿಸಿದೆ.

ಸಾರ್ವಜನಿಕ ಸ್ಥಳಗಳಲ್ಲಿ ಅನಧಿಕೃತ ಮದ್ಯ ಸೇವನೆಗೆ ಸಂಬಂಧಿಸಿದಂತೆ 15(ಎ) ಅಡಿಯಲ್ಲಿ 636 ಪ್ರಕರಣಗಳನ್ನು ದಾಖಲಿಸಿಕೊಂಡು ₹11.17 ಲಕ್ಷ ದಂಡ ವಸೂಲಿ ಮಾಡಲಾಗಿದೆ.

ಅಕ್ರಮ ಮದ್ಯ ಮಾರಾಟಕ್ಕೆ ಸಂಬಂಧಿಸಿದಂತೆ 28 ಘೋರ ಪ್ರಕರಣಗಳು, ಕಳ್ಳಭಟ್ಟಿ ಪ್ರಕರಣಗಳಿಗೆ ಸಂಬಂಧಿಸಿದಂತೆ 23 ಪ್ರಕರಣಗಳು ಹಾಗೂ ಎನ್‌ಡಿಪಿಎಸ್ ಕಾಯ್ದೆಯಡಿ 9 ಪ್ರಕರಣಗಳನ್ನು ದಾಖಲಿಸಿಕೊಂಡು ನಿಯಮಾನುಸಾರ ಕ್ರಮ ಕೈಗೊಳ್ಳಲಾಗಿದೆ.

ಪ್ರಸಕ್ತ ಮೇ–2026 ತಿಂಗಳಲ್ಲಿಯೂ 15(ಎ) ಅಡಿಯಲ್ಲಿ 34, ಬಿಎಲ್‌ಸಿ–13, ಘೋರ–6 ಹಾಗೂ ಎನ್‌ಡಿಪಿಎಸ್–1 ಪ್ರಕರಣಗಳನ್ನು ದಾಖಲಿಸಿಕೊಂಡು ಕ್ರಮ ಕೈಗೊಳ್ಳಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಪ್ರಶ್ನೆಪತ್ರಿಕೆ ಸೋರಿಕೆ ತಡೆಯಲು ಕೇಂದ್ರ ಸರ್ಕಾರ ಸಂಪೂರ್ಣ ವಿಫಲ: ಮಿಥುನ ಜಿ. ಪಾಟೀಲ ಆಕ್ರೋಶ

## 'ನೀಟ್' ಹೆಸರಿನಲ್ಲಿ ವಿದ್ಯಾರ್ಥಿಗಳ ಕನಸಿಗೆ ಕತ್ತರಿ..!

**■ವಿಜಯಸಾಕ್ಷಿ ಸುದ್ದಿ, ಡಂಬಳ**



ದೇಶದ ವೈದ್ಯಕೀಯ ಶಿಕ್ಷಣ ವ್ಯವಸ್ಥೆಯಲ್ಲಿ ಪಾರದರ್ಶಕತೆ ಹಾಗೂ ಸಮಾನ ಅವಕಾಶ ಕಲ್ಪಿಸುವ ಉದ್ದೇಶದಿಂದ ಜಾರಿಗೆ ತರಲಾದ ನೀಟ್ ಪರೀಕ್ಷೆಯು ಇದೀಗ ವಿಶ್ವಾಸಾರ್ಹತೆಯ ಸಂಕಷ್ಟಕ್ಕೆ ಸಿಲುಕಿರುವುದು ಅತ್ಯಂತ ದುರಂತದ ಸಂಗತಿ ಎಂದು ರೋಣ ಗ್ಯಾರಂಟಿ ಸಮಿತಿ ಅಧ್ಯಕ್ಷ ಮಿಥುನ ಜಿ. ಪಾಟೀಲ ಆರೋಪಿಸಿದರು.

ಡಂಬಳ ಹೋಬಳಿಯ ಡೋಣಿ ತಾಂಡದಲ್ಲಿ ಮಾತನಾಡಿದ ಅವರು, 2026ರ ನೀಟ್ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ ದೇಶದಾದ್ಯಂತ ಲಕ್ಷಾಂತರ ವಿದ್ಯಾರ್ಥಿಗಳು ಹಾಗೂ ಪೋಷಕರಲ್ಲಿ ತೀವ್ರ ಆತಂಕ ಸೃಷ್ಟಿಸಿದೆ ಎಂದು ಹೇಳಿದರು.

ವರ್ಷಗಳ ಕಾಲ ಪರಿಶ್ರಮಪಟ್ಟು ತಯಾರಿ ನಡೆಸಿದ ವಿದ್ಯಾರ್ಥಿಗಳ ಭವಿಷ್ಯ ಇಂದು ಅನಿಶ್ಚಿತತೆಯ ಅಂಚಿನಲ್ಲಿದೆ. ಇಂತಹ ಸಂದರ್ಭದಲ್ಲಿ ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಜಾಗೃತಿ ವಹಿಸಿ ವಿದ್ಯಾರ್ಥಿಗಳಿಗೆ ಸೂಕ್ತ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ನೀಟ್ ಪರೀಕ್ಷೆ ರದ್ದುಗೊಂಡಿರುವುದು ಕೇವಲ ಆಡಳಿತಾತ್ಮಕ ನಿರ್ಧಾರವಲ್ಲ. ಇದು ಸುಮಾರು 22 ಲಕ್ಷಕ್ಕೂ ಅಧಿಕ ವಿದ್ಯಾರ್ಥಿಗಳ ಕನಸು ಮತ್ತು ಪೋಷಕರ ನಂಬಿಕೆಗೆ ಬಿದ್ದ ದೊಡ್ಡ ಹೊಡೆತವಾಗಿದೆ. ವಿದ್ಯಾರ್ಥಿಗಳ ಶ್ರಮಕ್ಕೆ ನ್ಯಾಯ ಸಿಗಬೇಕಾದರೆ ಕೇಂದ್ರ ಸರ್ಕಾರ ಹಾಗೂ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ಸಂಪೂರ್ಣ ಜವಾಬ್ದಾರಿ ಹೊತ್ತು ಪಾರದರ್ಶಕ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ನೀಟ್ ಪರೀಕ್ಷೆಯಲ್ಲಿ ಅಕ್ರಮ ನಡೆಯುತ್ತಿರುವುದು ಇದೇ ಮೊದಲಲ್ಲ ಎಂದು ಆರೋಪಿಸಿದ ಅವರು, 2024ರ ಪರೀಕ್ಷೆಯಲ್ಲಿಯೂ ಪ್ರಶ್ನೆಪತ್ರಿಕೆ ಸೋರಿಕೆ ಆರೋಪಗಳು ಕೇಳಿ ಬಂದಿದ್ದವು. ಆ ಸಂದರ್ಭದಲ್ಲಿ ಸುಪ್ರೀಂ ಕೋರ್ಟ್ ಮಧ್ಯಪ್ರವೇಶಿಸಿ ಪರೀಕ್ಷಾ ಸುರಕ್ಷತೆಗಾಗಿ ಕಠಿಣ ಮಾರ್ಗಸೂಚಿಗಳನ್ನು ರೂಪಿಸಿತ್ತು ಎಂದು ಹೇಳಿದರು.

ಡಿಜಿಟಲ್ ಲಾಕ್ ವ್ಯವಸ್ಥೆ, ಬಯೋಮೆಟ್ರಿಕ್ ಪರಿಶೀಲನೆ, ಸಿಸಿಟಿವಿ ನಿಗಾ ಸೇರಿದಂತೆ ಹಲವು ಭದ್ರತಾ ಕ್ರಮಗಳನ್ನು ಘೋಷಿಸಲಾಗಿದ್ದರೂ, ಅವು ಕೇವಲ ಕಾಗದದಲ್ಲೇ ಉಳಿದಿವೆ. ಜಾರಿಗೆ ತರುವಲ್ಲಿ ಕೇಂದ್ರ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಟೀಕಿಸಿದರು.

ದೇಶದ ವಿದ್ಯಾರ್ಥಿಗಳ ಭವಿಷ್ಯದ ಪ್ರಶ್ನೆಯಲ್ಲಿ ಯಾವುದೇ ನಿರ್ಲಕ್ಷ್ಯ ಸಹಿಸಲಾಗದು. ವೈದ್ಯಕೀಯ ಶಿಕ್ಷಣ ಕ್ಷೇತ್ರದಲ್ಲಿ ನಂಬಿಕೆ ಉಳಿಸಿಕೊಳ್ಳಬೇಕಾದರೆ ಪರೀಕ್ಷಾ ವ್ಯವಸ್ಥೆಯಲ್ಲಿ ಸಂಪೂರ್ಣ ಪಾರದರ್ಶಕತೆ ಮತ್ತು ತಂತ್ರಜ್ಞಾನ ಆಧಾರಿತ ಭದ್ರತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಬೇಕು ಎಂದು ಹೇಳಿದರು.

ಪ್ರತಿ ವರ್ಷ ಲಕ್ಷಾಂತರ ವಿದ್ಯಾರ್ಥಿಗಳು ತಮ್ಮ ಕನಸುಗಳನ್ನು ಹೊತ್ತು ನೀಟ್ ಪರೀಕ್ಷೆಗೆ ಹಾಜರಾಗುತ್ತಾರೆ. ಗ್ರಾಮೀಣ ಹಾಗೂ ಮಧ್ಯಮ ವರ್ಗದ ಕುಟುಂಬಗಳ ಮಕ್ಕಳು ದಿನರಾತ್ರಿ ಪರಿಶ್ರಮಪಟ್ಟು ಪರೀಕ್ಷೆಗೆ ಸಿದ್ಧರಾಗುತ್ತಾರೆ. ಆದರೆ ಪ್ರಶ್ನೆಪತ್ರಿಕೆ ಸೋರಿಕೆಯಂತಹ ಘಟನೆಗಳು ಅವರ ಮಾನಸಿಕ ಸ್ಥೈರ್ಯ ಕುಗ್ಗಿಸುವುದಲ್ಲದೆ, ಶಿಕ್ಷಣ ವ್ಯವಸ್ಥೆಯ ಮೇಲಿನ ನಂಬಿಕೆಯನ್ನು ಹಾಳು ಮಾಡುತ್ತಿವೆ ಎಂದು ಆತಂಕ ವ್ಯಕ್ತಪಡಿಸಿದರು.

ಈ ಪ್ರಕರಣದ ಕುರಿತು ಸುಪ್ರೀಂ ಕೋರ್ಟ್ ಮೇಲ್ವಿಚಾರಣೆಯಲ್ಲಿ ಸ್ವತಂತ್ರ ತನಿಖೆ ನಡೆಸಬೇಕು. ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಂಡು ವಿದ್ಯಾರ್ಥಿಗಳಿಗೆ ನ್ಯಾಯ ಒದಗಿಸಬೇಕು. ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಕೇಂದ್ರ ಸರ್ಕಾರ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

> "ನೀಟ್ ಪರೀಕ್ಷೆಯ ವಿಶ್ವಾಸಾರ್ಹತೆ ಕುಸಿದರೆ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯ ಕತ್ತಲೆಯಾಗುತ್ತದೆ, ಕೇಂದ್ರ ಸರ್ಕಾರ ತಕ್ಷಣ ಹೊಣೆ ಹೊತ್ತು ಕ್ರಮ ಕೈಗೊಳ್ಳಬೇಕು."
> – ಮಿಥುನ ಜಿ. ಪಾಟೀಲ, ರೋಣ ಗ್ಯಾರಂಟಿ ಸಮಿತಿ ಅಧ್ಯಕ್ಷ

## ಸಿಡಿಲಿನ ಅಬ್ಬರಕ್ಕೆ ಟಿಸಿ ಸ್ಫೋಟ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಗದಗ ರಸ್ತೆಯ ಹಿರೇಮಠ ಶಾಲೆ ಸಮೀಪ ಬುಧವಾರ ಸಂಜೆ ಸಿಡಿಲು ಬಡಿದ ಪರಿಣಾಮ ಟ್ರಾನ್ಸ್‌ಫಾರ್ಮರ್ (ಟಿಸಿ) ಸ್ಫೋಟಗೊಂಡ ಘಟನೆ ನಡೆದಿದೆ. ಘಟನೆಯಿಂದ ಕೆಲಕಾಲ ಸಾರ್ವಜನಿಕರಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿತ್ತು.

ಭಾರೀ ಸಿಡಿಲಿನ ಹೊಡೆತಕ್ಕೆ ಟಿಸಿ ಜೋರಾಗಿ ಸ್ಫೋಟಗೊಂಡು, ಅದರೊಳಗಿನ ತೈಲ ಹೊರಗೆ ಸೋರಿಕೆಯಾಯಿತು. ಪ್ರಮುಖ ರಸ್ತೆಗೆ ಹೊಂದಿಕೊಂಡಿದ್ದ ಟ್ರಾನ್ಸ್‌ಫಾರ್ಮರ್ ಏಕಾಏಕಿ ಸ್ಫೋಟಗೊಂಡ ಪರಿಣಾಮ ಸ್ಥಳದಲ್ಲಿದ್ದ ಜನರು ಭಯಭೀತರಾಗಿ ಓಡಾಡಿದ ದೃಶ್ಯ ಕಂಡು ಬಂದಿತು.

ಸುದ್ದಿ ತಿಳಿಯುತ್ತಿದ್ದಂತೆ ಹೆಸ್ಕಾಂ ಸಿಬ್ಬಂದಿ ಹಾಗೂ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದರು. ಬಳಿಕ ದುರಸ್ತಿ ಕಾರ್ಯ ಕೈಗೊಂಡು ವಿದ್ಯುತ್ ಸರಬರಾಜು ಪುನಃಸ್ಥಾಪಿಸಲು ಕ್ರಮವಹಿಸಿದರು.

**"ಪಠ್ಯದ ಜೊತೆಗೆ ಕಲೆ, ಕ್ರೀಡೆ, ಸಂಸ್ಕಾರವೂ ಮಕ್ಕಳ ಬದುಕಿಗೆ ಅಗತ್ಯ" : ಡಾ. ಸುರೇಶ್ ಕಮ್ಮಾರ**

# ಮೊಬೈಲ್ ಗೀಳಿಗೆ ಬ್ರೇಕ್ ಹಾಕಿದ 'ಯುವ ಉತ್ಸವ'!

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಇಂದಿನ ಯುವಪೀಳಿಗೆಯ ಮಕ್ಕಳು ಕೇವಲ ಪಠ್ಯಕ್ಕೆ ಸೀಮಿತವಾಗದೇ, ನೃತ್ಯ, ಸಂಗೀತ, ಕರಾಟೆ ಸೇರಿದಂತೆ ಪಠ್ಯೇತರ ಚಟುವಟಿಕೆಗಳಲ್ಲಿಯೂ ತೊಡಗಿಸಿಕೊಳ್ಳಬೇಕು. ಇಂತಹ ಚಟುವಟಿಕೆಗಳು ಮಕ್ಕಳ ವ್ಯಕ್ತಿತ್ವ ವಿಕಸನಕ್ಕೆ ಅತ್ಯಗತ್ಯ ಎಂದು ಭಾರತದ ಮಾನವ ಹಕ್ಕುಗಳ ಸಮಿತಿ ಸದಸ್ಯರು ಹಾಗೂ ಜಿಲ್ಲಾ ಸಂಪನ್ಮೂಲಾಧಿಕಾರಿಗಳಾದ ಡಾ. ಸುರೇಶ್ ಕಮ್ಮಾರ ಹೇಳಿದರು.

ನಗರದ ಕ.ವಿ.ವಿ. ಸಂಘದ ಡಾ. ಪಾಟೀಲ ಪುಟ್ಟಪ್ಪ ಸಭಾಭವನದಲ್ಲಿ ಯುವ ಡಾನ್ಸ್ ಅಕಾಡೆಮಿ ಆಯೋಜಿಸಿದ್ದ 'ಯುವ ಉತ್ಸವ-2026' ಬೇಸಿಗೆ ಶಿಬಿರದ ಸಮಾರೋಪ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಯುವ ಡಾನ್ಸ್ ಅಕಾಡೆಮಿಯು ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗುವ ಚಟುವಟಿಕೆಗಳನ್ನು ಆಯೋಜಿಸುತ್ತಿರುವುದು ಶ್ಲಾಘನೀಯ. ಇಂತಹ ಕಾರ್ಯಗಳಿಗೆ ಪಾಲಕರ ಬೆಂಬಲ ಅತ್ಯಗತ್ಯವಾಗಿದೆ ಎಂದು ಹೇಳಿದರು. ಕರ್ನಾಟಕ ಸರ್ಕಾರದ ವಿವಿಧ ಯೋಜನೆಗಳ ಸದುಪಯೋಗವನ್ನು ಜನರು ಪಡೆದುಕೊಳ್ಳಬೇಕು ಎಂದು ಕರೆ ನೀಡಿದ ಅವರು, ಯುವ ಡಾನ್ಸ್




ಅಕಾಡೆಮಿಯ ನಿರ್ದೇಶಕ ರಮೇಶ್ ಪಾಟೀಲ್ ಅವರಿಗೆ ಭಾರತ ಸರ್ಕಾರದ ಹೊಸ ಯೋಜನೆಗಳನ್ನು ಒದಗಿಸಲು ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಇನ್ನೋರ್ವ ಉದ್ಘಾಟಕ ದೀಪಕ್ ಚಿಂಚೋರೆ ಮಾತನಾಡಿ, ಯುವ ಡಾನ್ಸ್ ಅಕಾಡೆಮಿ ರಾಜ್ಯಾದ್ಯಂತ ಹೆಸರುವಾಸಿಯಾಗಿದ್ದು, ಇಲ್ಲಿ ತರಬೇತಿ ಪಡೆದ ಅನೇಕ ಮಕ್ಕಳು ಉನ್ನತ ಮಟ್ಟಕ್ಕೆ ಬೆಳೆದಿದ್ದಾರೆ ಎಂದರು. ದೈಹಿಕ ಸದೃಢತೆಗೆ ನೃತ್ಯ ಮತ್ತು ವ್ಯಾಯಾಮ ಬಹಳ ಮುಖ್ಯವಾಗಿದ್ದು, ಹಂಪಿ ಉತ್ಸವ ಸೇರಿದಂತೆ ವಿವಿಧ ರಾಜ್ಯಮಟ್ಟದ ಕಾರ್ಯಕ್ರಮಗಳಲ್ಲಿ ಅಕಾಡೆಮಿಗೆ ಅವಕಾಶ ಹಾಗೂ ಸಹಕಾರ ನೀಡಲಾಗುವುದು ಎಂದು ತಿಳಿಸಿದರು.

ಶಿಕ್ಷಣ ತಜ್ಞ ಎಂ.ಎಂ. ಚಿಕ್ಕಮಠ ಮಾತನಾಡಿ, ಇಂದಿನ ದಿನಗಳಲ್ಲಿ ಮಕ್ಕಳು ಮೊಬೈಲ್ ಗೀಳಿಗೆ ಒಳಗಾಗುತ್ತಿರುವುದು ಆತಂಕಕಾರಿ ವಿಷಯ. ಬೇಸಿಗೆ ಶಿಬಿರದಲ್ಲಿ ಮೊಬೈಲ್ ವ್ಯಸನದ ವಿರುದ್ಧ ಜಾಗೃತಿ ಮೂಡಿಸುವ ನಾಟಕಗಳನ್ನು ಪ್ರದರ್ಶಿಸಿರುವುದು ಶ್ಲಾಘನೀಯ ಕಾರ್ಯ ಎಂದರು.

ಈಶ್ವರ್ ಶಿವಳ್ಳಿ ಮಾತನಾಡಿ, ಹುಬ್ಬಳ್ಳಿ-ಧಾರವಾಡದಲ್ಲಿ ಅನೇಕ ಬೇಸಿಗೆ ಶಿಬಿರಗಳು ನಡೆಯುತ್ತಿದ್ದರೂ, ವಿಜೃಂಭಣೆಯಿಂದ ಸಮಾರೋಪ ಸಮಾರಂಭ ಆಯೋಜಿಸುವ ವಿಶೇಷತೆ ಯುವ ಡಾನ್ಸ್ ಅಕಾಡೆಮಿಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸವಿತಾ ಅಮರಶೆಟ್ಟಿ ಮಾತನಾಡಿ, ಎರಡು-ಮೂರು ವರ್ಷದ ಪುಟ್ಟ ಮಕ್ಕಳಿಂದಲೇ ಫ್ಯಾಷನ್ ಶೋ ಪ್ರದರ್ಶನ ಮಾಡಿಸಿರುವುದು ವಿಶೇಷವಾಗಿದ್ದು, ಇಂತಹ ಅಕಾಡೆಮಿಗಳಿಂದ ಸಂಸ್ಕೃತಿ ಮತ್ತು ಕಲೆ ಉಳಿದುಕೊಂಡಿವೆ ಎಂದರು.

ಕೆಎಸ್‌ಪಿಎಸ್ ಪೊಲೀಸ್ ಆಯುಕ್ತ ಪ್ರಶಾಂತ್ ಸಿದ್ದನಗೌಡರ ಮಾತನಾಡಿ, ಬೇಸಿಗೆ ಶಿಬಿರಗಳು ಮಕ್ಕಳಲ್ಲಿ ಶಿಸ್ತು

> "ಮಕ್ಕಳಿಗೆ ಓದಿನ ಜೊತೆಗೆ ಕಲೆ, ಕ್ರೀಡೆ ಮತ್ತು ಸಂಸ್ಕಾರವೂ ಅಗತ್ಯ."
> **– ಡಾ. ಸುರೇಶ್ ಕಮ್ಮಾರ**

> "ಕಲೆ ಮತ್ತು ಸಂಸ್ಕೃತಿಯ ಮೂಲಕ ಮಕ್ಕಳಲ್ಲಿ ಆತ್ಮವಿಶ್ವಾಸ ಬೆಳೆಸುವುದು ಅಕಾಡೆಮಿಯ ಧ್ಯೇಯ."
> – ಡಾ. ಉಮೇಶ್ ಹಳ್ಳಿಕೇರಿ

ಹಾಗೂ ಆತ್ಮವಿಶ್ವಾಸ ಬೆಳೆಸುತ್ತವೆ. ಯುವ ಡಾನ್ಸ್ ಅಕಾಡೆಮಿಯ ಕಾರ್ಯವೈಖರಿ ಅತ್ಯಂತ ಅಚ್ಚುಕಟ್ಟಾಗಿದ್ದು, ಸದಾ ನಮ್ಮ ಬೆಂಬಲ ಇರುತ್ತದೆ ಎಂದು ಹೇಳಿದರು.

ಸುವರ್ಣ ನ್ಯೂಸ್ ಹಿರಿಯ ವರದಿಗಾರ ಪರಶುರಾಮ ಅಂಗಡಿ ಅತಿಥಿಯಾಗಿ ಭಾಗವಹಿಸಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಡಾ. ಉಮೇಶ್ ಹಳ್ಳಿಕೇರಿ ಮಾತನಾಡಿ, ಪ್ರತಿಭಾವಂತ ಮಕ್ಕಳನ್ನು ಗುರುತಿಸುವ ಜೊತೆಗೆ ಕ್ಯಾನ್ಸರ್ ಪೀಡಿತ ಮಕ್ಕಳಿಗೆ




ಧನಸಹಾಯ, ಪರಿಸರ ಕಾಳಜಿಗಾಗಿ ಸಸಿ ವಿತರಣೆ ಸೇರಿದಂತೆ ಸಮಾಜಮುಖಿ ಕಾರ್ಯಗಳನ್ನು ಯುವ ಡಾನ್ಸ್ ಅಕಾಡೆಮಿ ನಿರಂತರವಾಗಿ ನಡೆಸುತ್ತಿರುವುದು ಶ್ಲಾಘನೀಯ ಎಂದರು.

ಕಾರ್ಯಕ್ರಮದಲ್ಲಿ ಸುಮಾರು 80 ಮಕ್ಕಳು ವೈವಿಧ್ಯಮಯ ನೃತ್ಯ, ಫ್ಯಾಷನ್ ಶೋ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಪ್ರದರ್ಶಿಸಿ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರರಾದರು. ಕುಮಾರ್ ಋತ್ವಿಕ್ ಸತ್ತಿಗೇರಿ ಅವರ ನಗೆಹಬ್ಬ ವಿಶೇಷ ಆಕರ್ಷಣೆಯಾಗಿತ್ತು.

ಯುವ ಡಾನ್ಸ್ ಅಕಾಡೆಮಿಯ ಹಿರಿಯ ವಿದ್ಯಾರ್ಥಿನಿ ವಿಜಯಲಕ್ಷ್ಮಿ ಮೇಸ್ತ್ರಿ ಸಂಸ್ಥೆಯ 18 ವರ್ಷಗಳ ಸಾಧನೆಯ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ಅದೃಶ್ಯ ಕುರುಬಗಟ್ಟಿ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು. ಸುಶ್ಮಿತಾ ವಂದಿಸಿದರು.

ಕಾರ್ಯಕ್ರಮದಲ್ಲಿ ಯುವ ಡಾನ್ಸ್ ಅಕಾಡೆಮಿಯ ಗೌರವಾಧ್ಯಕ್ಷೆ ರತ್ನಮ್ಮ ಪಾಟೀಲ್, ಕಾರ್ಯದರ್ಶಿ ಸೌಮ್ಯ ಪಾಟೀಲ್, ಶಿಕ್ಷಕರಾದ ರೇಣುಕಾ, ಸುಶ್ಮಿತಾ, ಕರಾಟೆ ಶಿಕ್ಷಕ ವಿಠ್ಠಲ್ ಕಟ್ಟಿಮನಿ, ಮಾರ್ಗದರ್ಶಕ ಉಳವಪ್ಪ ಹುಡೇದ್ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

## ವಸತಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 2026-27ನೇ ಸಾಲಿನ ಸರಕಾರಿ ಮೆಟ್ರಿಕ್ ನಂತರದ ಹಾಗೂ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪಿ.ಯು.ಸಿ ಯಿಂದ ಡಿಗ್ರಿವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಮೆಟ್ರಿಕ್ ನಂತರದ ವಸತಿ ನಿಲಯಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಹಾಗೆಯೇ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಸತಿ ನಿಲಯಗಳಲ್ಲಿಯೂ ಪ್ರವೇಶ ಅವಕಾಶ ಕಲ್ಪಿಸಲಾಗಿದೆ.

ವಿದ್ಯಾರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ ಸಮಾಜ ಕಲ್ಯಾಣ ಇಲಾಖೆ ವೆಬ್‌ಸೈಟ್ ಮೂಲಕ ಸ್ಟೇಟ್ ಹಾಸ್ಟೆಲ್ ಪೋರ್ಟಲ್‌ನಲ್ಲಿ ಆನ್‌ಲೈನ್ ಅರ್ಜಿ ಸಲ್ಲಿಸಬೇಕು. ಅರ್ಜಿಯ ಪ್ರಿಂಟ್ ಪ್ರತಿಯನ್ನು ಅಗತ್ಯ ದಾಖಲೆಗಳೊಂದಿಗೆ ಸಮಾಜ ಕಲ್ಯಾಣ ಇಲಾಖೆ, ಗದಗ ಕಚೇರಿಗೆ ಸಲ್ಲಿಸುವಂತೆ ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ 08372-297258 ಹಾಗೂ 9480843128 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸ್ನೇಹದ ಬಾಂಧವ್ಯ ಸಾರುವ ಕನ್ನಡ ಚಿತ್ರಕ್ಕೆ ಬಿಡುಗಡೆ ಸಿದ್ಧತೆ**

## ಮೇ 22ರಂದು ತೆರೆಗೆ 'ಕುಚುಕು'



**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಶ್ರೀ ಚಾಮುಂಡೇಶ್ವರಿ ಪಿಕ್ಚರ್ಸ್ ಮೈಸೂರು ಸಂಸ್ಥೆಯ ನಿರ್ಮಾಣದ ಸ್ನೇಹದ ಮಹತ್ವ ಸಾರುವ ಕನ್ನಡ ಚಲನಚಿತ್ರ 'ಕುಚುಕು' ಇದೇ ಮೇ 22ರಂದು ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ.

ಚಿತ್ರರಂಗದ ಮೇರು ನಟರಾದ ಅಂಬರೀಶ್ ಹಾಗೂ ವಿಷ್ಣುವರ್ಧನ್ ಅವರ ಸ್ನೇಹದ ಸವಿ ನೆನಪನ್ನು ಮನದಟ್ಟು ಮಾಡುವ ರೀತಿಯಲ್ಲಿ ಈ ಚಿತ್ರ ನಿರ್ಮಾಣಗೊಂಡಿದೆ. ಸ್ನೇಹಿತರಿಬ್ಬರ ಬಾಂಧವ್ಯ, ಆತ್ಮೀಯತೆ ಮತ್ತು ಬದುಕಿನ ಸಂಬಂಧಗಳನ್ನು ಚಿತ್ರದಲ್ಲಿ ಮನಮುಟ್ಟುವಂತೆ ಕಟ್ಟಿಕೊಡಲಾಗಿದೆ.

ಕಾರವಾರ, ಹೊನ್ನಾವರ ಹಾಗೂ ಮೈಸೂರು ಭಾಗಗಳಲ್ಲಿ ಸುಮಾರು ನಲವತ್ತೈದು ದಿನಗಳ ಕಾಲ ನಿರಂತರ ಚಿತ್ರೀಕರಣ ನಡೆಸಲಾಗಿದೆ. ಚಿತ್ರದಲ್ಲಿನ ಐದು ಹಾಡುಗಳಿಗೆ ನಿರ್ದೇಶಕರೇ ನೃತ್ಯ ಸಂಯೋಜನೆ ಮಾಡಿದ್ದು, ನಾಲ್ಕು ಸಾಹಸ ದೃಶ್ಯಗಳನ್ನು ಮಾಸ್ ಮಾದ, ಹ್ಯಾರೀಶ್ ಜಾನಿ ಹಾಗೂ ಪವರ್ ಪುಷ್ಪರಾಜ್ ಸಂಯೋಜಿಸಿದ್ದಾರೆ.

ಚಿತ್ರದಲ್ಲಿ ಅರ್ಜುನ್ ಚವ್ಹಾಣ್ ಮತ್ತು ಬಸವರಾಜ್ ಕುಮಾರ್ ನಾಯಕ ನಟರಾಗಿ ಅಭಿನಯಿಸಿದ್ದು, ಪ್ರಿಯದರ್ಶಿನಿ ನಾಯಕಿಯಾಗಿ ಕಾಣಿಸಿಕೊಂಡಿದ್ದಾರೆ. ಪೋಷಕ ಪಾತ್ರಗಳಲ್ಲಿ ಬಾಲರಾಜ್ ವಾಡಿ, ಶಂಕರ್ ಅಶ್ವಥ್, ರಮೇಶ್ ಪಂಡಿತ್, ಹನುಮಂತೇಗೌಡ್ರು, ಶಿವಾಜಿ, ಜಗ್ಗಪ್ಪ, ಕೈಲಾಶ್ ಕುಟ್ಟಪ್ಪ, ಯಶೋದಮ್ಮ, ಮಹೇಂದ್ರ ಹಾಗೂ ಶಶಿಗೌಡ ಅಭಿನಯಿಸಿದ್ದಾರೆ.

ಚಿತ್ರಕ್ಕೆ ರಾಮನಾಥ ರಾಜ್ ಛಾಯಾಗ್ರಹಣ, ಅರವಿಂದ್ ರಾಜ್ ಸಂಕಲನ, ಎ.ಟಿ. ರವೀಶ್ ಸಂಗೀತ ಹಾಗೂ ಸೂರಜ್ ಹಿನ್ನೆಲೆ ಸಂಗೀತ ನೀಡಿದ್ದಾರೆ. ಸಂಭಾಷಣೆ ಮತ್ತು ಸಹ ನಿರ್ದೇಶನವನ್ನು ರವಿಶಂಕರನಾಗ್ ನಿರ್ವಹಿಸಿದ್ದಾರೆ. ಚಿತ್ರದ ಜನಸಂಪರ್ಕ ಅಧಿಕಾರಿಗಳಾಗಿ ಸುಧೀಂದ್ರ ವೆಂಕಟೇಶ್, ಡಾ. ಪ್ರಭು ಗಂಜಿಹಾಳ ಹಾಗೂ ಡಾ. ವೀರೇಶ್ ಹಂಡಿಗಿ ಕಾರ್ಯನಿರ್ವಹಿಸಿದ್ದಾರೆ. ಚಿತ್ರವನ್ನು ಮೈಸೂರು ರಾಜು ನಿರ್ದೇಶಿಸಿದ್ದು, ಶ್ರೀಮತಿ ನಾಗರತ್ನಮ್ಮ ಬಂಡವಾಳ ಹೂಡಿದ್ದಾರೆ.

"ಮನೆಮಂದಿಯೆಲ್ಲ ಕುಳಿತು ನೋಡುವಂತಹ ಮನರಂಜನಾ ಚಿತ್ರ ಇದಾಗಿದೆ" ಎಂದು ನಿರ್ದೇಶಕ ಮೈಸೂರು ರಾಜು ತಿಳಿಸಿದ್ದಾರೆ.

**10ಕ್ಕೂ ಹೆಚ್ಚು ಮಹಿಳೆಯರು ಕೆಲಸ ಮಾಡುವ ಕಚೇರಿ, ಕೈಗಾರಿಕೆಗಳಲ್ಲಿ ತುರ್ತಾಗಿ ಅಳವಡಿಸಿ; ನಿಯಮ ಉಲ್ಲಂಘಿಸಿದರೆ ₹50 ಸಾವಿರ ದಂಡ – ಜಿಲ್ಲಾಧಿಕಾರಿ ಸ್ನೇಹಲ್ ಆರ್.**

# 'ಮಹಿಳಾ ಸುರಕ್ಷತೆಗೆ ಶೀ-ಬಾಕ್ಸ್ ಕಡ್ಡಾಯ'

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಸರ್ಕಾರಿ, ಅರೆ ಸರ್ಕಾರಿ, ಖಾಸಗಿ ಕಚೇರಿಗಳು ಹಾಗೂ ಕೈಗಾರಿಕೆಗಳಲ್ಲಿ 10 ಮತ್ತು ಅದಕ್ಕಿಂತ ಹೆಚ್ಚು ಮಹಿಳೆಯರು ಕಾರ್ಯನಿರ್ವಹಿಸುತ್ತಿದ್ದರೆ ಕಡ್ಡಾಯವಾಗಿ ಮತ್ತು ತುರ್ತಾಗಿ ಶೀ-ಬಾಕ್ಸ್ (ಖಃಜ-ಃಠಥ) ಅಳವಡಿಸಬೇಕು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಆಯೋಜಿಸಿದ್ದ "ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ ತಡೆ, ನಿಷೇಧ ಹಾಗೂ ಪರಿಹಾರ ಕಾಯ್ದೆ-2013" ಅನುಷ್ಠಾನ ಕುರಿತ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ ನಿಷೇಧ ಕಾಯ್ದೆ-2013 (ಕಔಖಊ ಂಛಿಣ) ಅನ್ನು ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕು. ಮಹಿಳೆಯರಿಗೆ ಯಾವುದೇ ತೊಂದರೆ ಅಥವಾ ಅವಮಾನವಾಗದಂತೆ ಸುರಕ್ಷಿತ ವಾತಾವರಣ ಕಲ್ಪಿಸುವ ಜವಾಬ್ದಾರಿ ಪ್ರತಿಯೊಂದು ಸಂಸ್ಥೆಯ ಮೇಲಿದೆ ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ಮಹಿಳೆಯರಿಗೆ ಲೈಂಗಿಕ ಕಿರುಕುಳ ಅಥವಾ ದೌರ್ಜನ್ಯ ಸಂಭವಿಸಿದರೆ, ಅವರು ಕಚೇರಿಗಳಲ್ಲಿ ಅಳವಡಿಸಿರುವ ಶೀ-ಬಾಕ್ಸ್‌ನಲ್ಲಿ ದೂರು ಸಲ್ಲಿಸಬಹುದು. 10ಕ್ಕಿಂತ ಹೆಚ್ಚು ಮಹಿಳಾ ಸಿಬ್ಬಂದಿ



ಇರುವ ಸಂಸ್ಥೆಗಳು ಜಿಲ್ಲಾ ಆಂತರಿಕ ಮಹಿಳಾ ದೂರು ಸಮಿತಿಗೆ ದೂರು ಸಲ್ಲಿಸುವ ಅವಕಾಶವೂ ಇದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಈಗಾಗಲೇ 66 ಕಚೇರಿಗಳಲ್ಲಿ 10ಕ್ಕಿಂತ ಹೆಚ್ಚು ಮಹಿಳಾ ಸಿಬ್ಬಂದಿ ಇದ್ದು, ಅಲ್ಲಿ ಆಂತರಿಕ ದೂರು ಸಮಿತಿಗಳನ್ನು ರಚಿಸಲಾಗಿದೆ. 1408 ತಾಲೂಕು ಮಟ್ಟದ ಕಚೇರಿಗಳಲ್ಲಿಯೂ ಸಮಿತಿಗಳನ್ನು ರಚಿಸಲಾಗಿದ್ದು, ಇದರಲ್ಲಿ 928 ಕಚೇರಿಗಳ ವಿವರಗಳನ್ನು ಶೀ-ಬಾಕ್ಸ್ ಪೋರ್ಟಲ್‌ನಲ್ಲಿ ಅಳವಡಿಸಲಾಗಿದೆ. ಉಳಿದ 480 ಕಚೇರಿಗಳ ಮಾಹಿತಿ ಅಪ್‌ಲೋಡ್ ಪ್ರಗತಿಯಲ್ಲಿದೆ ಎಂದು ಮಾಹಿತಿ ನೀಡಿದರು.

391 ಖಾಸಗಿ ಕಚೇರಿಗಳ ಮಾಹಿತಿಯನ್ನು ಪೋರ್ಟಲ್‌ನಲ್ಲಿ ಅನುಮೋದಿಸಲಾಗಿದ್ದು, ಇನ್ನೂ 314 ಸಂಸ್ಥೆಗಳು ತಮ್ಮ ಆಂತರಿಕ ದೂರು ಸಮಿತಿಯ ವಿವರಗಳನ್ನು ದಾಖಲಿಸಿಲ್ಲ ಎಂದು ಹೇಳಿದರು.

ಶೀ-ಬಾಕ್ಸ್‌ಗಳನ್ನು ಪ್ರತೀ ವಾರ ತೆರೆದು ಪರಿಶೀಲಿಸಬೇಕು. ಬಂದ ದೂರುಗಳನ್ನು ಪಾರದರ್ಶಕವಾಗಿ ಮತ್ತು ಕಾನೂನಾತ್ಮಕವಾಗಿ ತನಿಖೆ ನಡೆಸಿ ಕ್ರಮ ಕೈಗೊಳ್ಳಬೇಕು. 10ಕ್ಕಿಂತ ಕಡಿಮೆ ಮಹಿಳಾ ಸಿಬ್ಬಂದಿ ಇರುವ ಕಚೇರಿಗಳ ಮಹಿಳೆಯರು ಜಿಲ್ಲಾ ಆಂತರಿಕ ದೂರು ಸಮಿತಿಗೆ ನೇರವಾಗಿ ದೂರು ಸಲ್ಲಿಸಬಹುದು ಎಂದು ತಿಳಿಸಿದರು.

ಪೋಶ್ ಕಾಯ್ದೆಯ ಸಮಗ್ರ ಅನುಷ್ಠಾನಕ್ಕಾಗಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಮಟ್ಟದ ಸಮನ್ವಯ ಸಮಿತಿ ರಚಿಸಲಾಗಿದೆ.

ಸಮಿತಿಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್ ಸಿಇಒ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಕಾರ್ಮಿಕ ಇಲಾಖೆ ಅಧಿಕಾರಿ, ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಸದಸ್ಯರಾಗಿದ್ದಾರೆ.

> "ಮಹಿಳೆಯರು ಯಾವುದೇ ಭಯ, ಕಿರಿಕಿರಿ ಅಥವಾ ಅವಮಾನ ಅನುಭವಿಸದೆ ನಿರ್ಭಯವಾಗಿ ಕೆಲಸ ಮಾಡುವ ವಾತಾವರಣ ನಿರ್ಮಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ."
> **– ಸ್ನೇಹಲ್ ಆರ್**, ಜಿಲ್ಲಾಧಿಕಾರಿ

ಧಾರವಾಡ ಜಿಲ್ಲಾ ಸ್ಥಳೀಯ ದೂರು ಸಮಿತಿಯನ್ನು ಡಾ. ಸಂಗೀತಾ ಮಾನೆ ಅವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದೆ.

ಸದಸ್ಯರಾಗಿ ಸುನಂದಾ ಯಕಂಚಿ, ಜ್ಯೋತಿ ಮುದಿಗೌಡರ ಹಾಗೂ ಜಯಶ್ರೀ ಕೊರಿ ಅವರನ್ನು ನೇಮಿಸಲಾಗಿದೆ.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಜಿಲ್ಲಾ ಮಟ್ಟದ ಸ್ಥಳೀಯ ದೂರು ಸಮಿತಿ ಅಧ್ಯಕ್ಷೆ ಡಾ. ಸುಜಾತಾ ಮಾನೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

**ಕತ್ರಿಗಾರ ಹಬ್ಬದ ಅಂಗವಾಗಿ ಲಕ್ಷ್ಮೇಶ್ವರದಲ್ಲಿ 7 ಜೋಡಿಗಳ ವಿವಾಹ**

# 'ಸಾಮೂಹಿಕ ವಿವಾಹ ಬಡ ಕುಟುಂಬಗಳಿಗೆ ಆಶಾಕಿರಣ'

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ವಿಜಯಸಾಕ್ಷಿ ಸುದ್ದಿ,

ಸಾಮೂಹಿಕ ವಿವಾಹಗಳು ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳ ವೆಚ್ಚದ ಭಾರ ಕಡಿಮೆ ಮಾಡಿ ಹೊಸ ಬದು-ಕಿಗೆ ರಹದಾರಿಯಾಗಿವೆ. ಸಂಘಟನೆಗಳು, ಸಮಾಜಗಳು, ಧಾರ್ಮಿಕ ಕೇಂದ್ರಗಳು ಹಾಗೂ ಮಠ-ಮಾನ್ಯಗಳು ಆಯೋಜಿಸುವ ಸಾಮೂಹಿಕ ವಿವಾಹಗಳು ಬಡ ಕುಟುಂಬಗಳಿಗೆ ಆಶಾಕಿರಣವಾಗಿವೆ ಎಂದು ಧಾರ್ಮಿಕ ಚಿಂತಕ ರಾಯಪ್ಪ ಅಮೋಘಿಮಠ ಹೇಳಿದರು.

ಪಟ್ಟಣದ ಮ್ಯಾಗೇರಿ ಓಣಿಯ ಶ್ರೀ ಬೀರೇಶ್ವರ ದೇವಸ್ಥಾನದ ಆವರಣದಲ್ಲಿ ಗುರುವಾರ ಕತ್ರಿಗಾರ ಹಬ್ಬದ ಪ್ರಯುಕ್ತ ಪ್ರತಿವರ್ಷದಂತೆ ಆಯೋಜಿಸಿದ್ದ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

"ಮದುವೆ ವೆಚ್ಚ ಭರಿಸಲು ಸಾಧ್ಯವಾಗದ ಪರಿಸ್ಥಿತಿಯಲ್ಲಿ ಸಾಮೂಹಿಕ ವಿವಾಹಗಳು ಅನೇಕ ಕುಟುಂಬಗಳಿಗೆ ದೊಡ್ಡ ನೆರವಾಗುತ್ತಿವೆ. ಇಂತಹ ಕಾರ್ಯಕ್ರಮಗಳು ಸಮಾಜದಲ್ಲಿ ಸಮಾನತೆ, ಸಹಕಾರ ಹಾಗೂ ಸರಳತೆಯ ಮೌಲ್ಯಗಳನ್ನು ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿವೆ" ಎಂದು



ಹೇಳಿದರು.

ಬಡವರ ಬದುಕಿಗೆ ಆಸರೆಯಾಗುತ್ತಿರುವ ಇಂತಹ ಕಾರ್ಯಕ್ರಮಗಳು ಇನ್ನಷ್ಟು ಹೆಚ್ಚಾಗಬೇಕು. ಹಾಲುಮತ ಸಮಾಜದಿಂದ ನಿರಂತರವಾಗಿ ಆಯೋಜಿಸಲಾಗುತ್ತಿರುವ ಸಾಮೂಹಿಕ ವಿವಾಹ ಕಾರ್ಯಕ್ರಮ ಶ್ಲಾಘನೀಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ವಿವಾಹಬಂಧನಕ್ಕೊಳಗಾದ ನವದಂಪತಿಗಳು ಗುರುಹಿರಿಯರನ್ನು ಗೌರವದಿಂದ ಕಾಣುತ್ತಾ ಪರಸ್ಪರ ಹೊಂದಾಣಿಕೆಯಿಂದ ಸುಖೀ ಜೀವನ ನಡೆಸಬೇಕು ಎಂದು ಆಶೀರ್ವಚನ ನೀಡಿದರು.

ಸಾಮೂಹಿಕ ವಿವಾಹ ಸಮಾರಂಭದಲ್ಲಿ 7 ಜೋಡಿಗಳು ಸತಿ-ಪತಿಗಳಾದರು. ಶ್ರೀ ಬೀರೇಶ್ವರ ದೇವಸ್ಥಾನದಲ್ಲಿ ವಿವಾಹದ ವಿಧಿ-ವಿಧಾನಗಳು ಸಂಪ್ರದಾಯಬದ್ಧವಾಗಿ ನೆರವೇರಿಸಲಾಯಿತು. ಬಳಿಕ ಭಕ್ತರಿಗೆ ಪ್ರಸಾದ ವ್ಯವಸ್ಥೆ ಕಲ್ಪಿಸಲಾಗಿತ್ತು.

> "ಸಾಮೂಹಿಕ ವಿವಾಹಗಳು ಬಡ ಕುಟುಂಬಗಳ ಆರ್ಥಿಕ ಹೊರೆ ಕಡಿಮೆ ಮಾಡುತ್ತವೆ. ಸಮಾಜದಲ್ಲಿ ಸರಳತೆ ಮತ್ತು ಸಮಾನತೆಯ ಸಂದೇಶ ಸಾರುತ್ತವೆ."
> **– ರಾಯಪ್ಪ ಅಮೋಘಿಮಠ,** ಧಾರ್ಮಿಕ ಚಿಂತಕ

ಕಾರ್ಯಕ್ರಮದಲ್ಲಿ ಹಿರಿಯರಾದ ಪಿ.ಆರ್. ಕುಲಕರ್ಣಿ, ಮಹೇಶ ಲಿಂಬಯ್ಯಸ್ವಾಮಿಮಠ, ಪುರಸಭೆ ಮಾಜಿ ಅಧ್ಯಕ್ಷ ವಿ.ಜಿ. ಪಡಗೇರಿ, ಯಲ್ಲವ್ವ ದುರ್ಗಣ್ಣವರ, ನೀಲಪ್ಪ ಪೂಜಾರ, ಗಂಗಪ್ಪ ದುರ್ಗಣ್ಣವರ, ಶಿವಾನಂದ ಉಳ್ಳಟ್ಟಿ, ಸಿದ್ದಪ್ಪ ಪೂಜಾರ, ದೇವಪ್ಪ ಉಳ್ಳಟ್ಟಿ, ಮಾಳಿಂಗರಾಯ ಪೂಜಾರ, ಪಾಪಣ್ಣ ಬನ್ನಿ, ಪುಟ್ಟಪ್ಪ ಕೋರಿ, ಹಣಮಂತ ಉಳ್ಳಟ್ಟಿ, ನಾಗಪ್ಪ ಬಿಂಗಿ, ಶೇಖಪ್ಪ ಕೋರಿ, ನಿಂಗಪ್ಪ ಗೌಡನಾಯ್ಕರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಮೇ 20ರಂದು ಗದಗದಲ್ಲಿ ನೇರ ಸಂದರ್ಶನ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಮೇ 20ರಂದು ನಗರದ ಮುಥೂಟ್ ಫಿನ್‌ಕಾರ್ಪ್ ಲಿಮಿಟೆಡ್ ಕಚೇರಿಯಲ್ಲಿ ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ.

ನಗರದ ಹಳೆ ಕಾಮತ್ ಹೋಟೆಲ್ ಎದುರಿನ ಸ್ಟೇಶನ್ ರಸ್ತೆಯಲ್ಲಿರುವ ಮುಥೂಟ್ ಫಿನ್‌ಕಾರ್ಪ್ ಲಿಮಿಟೆಡ್ ಕಚೇರಿಯಲ್ಲಿ ಬೆಳಿಗ್ಗೆ 10 ಗಂಟೆಗೆ ಸಂದರ್ಶನ ಆರಂಭವಾಗಲಿದೆ.

ಬಿಸಿನೆಸ್ ಡೆವಲಪ್‌ಮೆಂಟ್ ಆಫೀಸರ್ ಹಾಗೂ ಕಸ್ಟಮರ್ ಸರ್ವಿಸ್ ಎಕ್ಸಿಕ್ಯೂಟಿವ್ ಹುದ್ದೆಗಳಿಗೆ ನೇಮಕಾತಿ ನಡೆಯಲಿದೆ.

ಬಿಸಿನೆಸ್ ಡೆವಲಪ್‌ಮೆಂಟ್ ಆಫೀಸರ್ ಹುದ್ದೆಗೆ ಪಿಯುಸಿ ಅಥವಾ ಯಾವುದೇ ಪದವಿ ವಿದ್ಯಾರ್ಹತೆ ಹೊಂದಿದ್ದು, ಕನಿಷ್ಠ 6 ತಿಂಗಳ ಅನುಭವ ಹೊಂದಿರುವ 18 ರಿಂದ 28 ವರ್ಷದ ಪುರುಷ ಅಭ್ಯರ್ಥಿಗಳು ಅರ್ಹರಾಗಿರುತ್ತಾರೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಗದಗ, ನರಗುಂದ, ರೋಣ, ಮುಂಡರಗಿ, ಗಜೇಂದ್ರಗಡ ಹಾಗೂ ಹುಲಕೋಟಿ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸಲು ಅವಕಾಶ ನೀಡಲಾಗುತ್ತದೆ.

ಕಸ್ಟಮರ್ ಸರ್ವಿಸ್ ಎಕ್ಸಿಕ್ಯೂಟಿವ್ ಹುದ್ದೆಗೆ ಯಾವುದೇ ಪದವೀಧರ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಈ ಹುದ್ದೆಗೂ ಕನಿಷ್ಠ 6 ತಿಂಗಳ ಅನುಭವ ಕಡ್ಡಾಯವಾಗಿದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಗದಗ, ನರಗುಂದ, ರೋಣ, ಮುಂಡರಗಿ, ಗಜೇಂದ್ರಗಡ, ಅಣ್ಣಿಗೇರಿ ಹಾಗೂ ಲಕ್ಷ್ಮೇಶ್ವರ ಪ್ರದೇಶಗಳಲ್ಲಿ ಕೆಲಸ ನೀಡಲಾಗುತ್ತದೆ.

ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಅಂಕಪಟ್ಟಿಗಳ ಝೆರಾಕ್ಸ್ ಪ್ರತಿಗಳು, ಎರಡು ಬಯೋಡಾಟಾ ಹಾಗೂ ಆಧಾರ್ ಕಾರ್ಡ್ ಪ್ರತಿಯೊಂದಿಗೆ ಹಾಜರಾಗಬೇಕು.

ನೇರ ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಸ್ಥಳದಲ್ಲೇ ನೋಂದಣಿ ಕಡ್ಡಾಯವಾಗಿರುತ್ತದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ.ಎನ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ 8431602181 ಹಾಗೂ 6363330688 ಸಂಖ್ಯೆಗೆ ಸಂಪರ್ಕಿಸಬಹುದು.

### ಭಾರಿ ಗಾಳಿ-ಮಳೆಗೆ ರಸ್ತೆಗಳು ಜಲಾವೃತ; ಮನೆಗಳಿಗೆ ನೀರು ನುಗ್ಗಿ ಜನರ ಪರದಾಟ, ಮರ ಬಿದ್ದು ಕುಟುಂಬ ಪಾರು!

# ಮೊದಲ ಮಳೆಯಲ್ಲೇ ಲಕ್ಷ್ಮೇಶ್ವರ ತತ್ತರ..!

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಟ್ಟಣದಲ್ಲಿ ಗುರುವಾರ ರಾತ್ರಿ ಸುರಿದ ಭಾರಿ ಮಳೆ ಹಾಗೂ ಬಿರುಗಾಳಿಯ ಅಬ್ಬರಕ್ಕೆ ಜನಜೀವನ ಸಂಪೂರ್ಣ ಅಸ್ತವ್ಯಸ್ತಗೊಂಡಿದ್ದು, ಪಟ್ಟಣದ ಹಲವು ಪ್ರದೇಶಗಳು ಜಲಾವೃತವಾಗಿ ಜನರು ರಾತ್ರಿಯಿಡಿ ಪರದಾಡುವಂತಾಯಿತು.

ಮುಂಗಾರಿನ ಮೊದಲ ಮಳೆಯಲ್ಲೇ ತ್ಯಾಜ್ಯದಿಂದ ತುಂಬಿಕೊಂಡಿದ್ದ ಚರಂಡಿಗಳ ಕೊಳಚೆ ನೀರು ರಸ್ತೆಗಳಿಗೆ ಹರಿದು ಬಂದ ಪರಿಣಾಮ ರಸ್ತೆಗಳು ಕೆರೆಯಂತಾಗಿದ್ದವು. ಪಟ್ಟಣದ ಶಿಗ್ಲಿ ಕ್ರಾಸ್, ಗ್ರಂಥಾಲಯದ ಬಳಿ ಅಪಾರ ಪ್ರಮಾಣದ ನೀರು ಹರಿದು ಬಂದು ರಸ್ತೆಗಳಲ್ಲಿ ಕೊಳಚೆ ನೀರು ತುಂಬಿಕೊಂಡಿತ್ತು. ಬಹುತೇಕ ರಸ್ತೆಗಳಲ್ಲಿ ತಗ್ಗು-ಗುಂಡಿಗಳು ನೀರಿನಿಂದ ತುಂಬಿದ್ದರಿಂದ ವಾಹನ ಸವಾರರು ಹಾಗೂ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸಿದರು.

ಅಂಬೇಡ್ಕರ್ ನಗರ, ಮುಕ್ತಿನಗರ, ಬಸವೇಶ್ವರ ನಗರ ಸೇರಿದಂತೆ ತಗ್ಗು ಪ್ರದೇಶಗಳ ಅನೇಕ ಮನೆಗಳಿಗೆ ನೀರು ನುಗ್ಗಿ ನಿವಾಸಿಗಳು ಆತಂಕದಲ್ಲಿ ರಾತ್ರಿಯಿಡಿ ಕಾಲ ಕಳೆಯುವಂತಾಯಿತು.

ಭಾರಿ ಗಾಳಿ-ಮಳೆಯ ಅಬ್ಬರಕ್ಕೆ ಪಟ್ಟಣದ ಹಲವೆಡೆ ವಿದ್ಯುತ್ ಕಂಬಗಳು ಹಾಗೂ ಮರಗಿಡಗಳು ನೆಲಕ್ಕುರುಳಿದ ಪರಿಣಾಮ ವಿದ್ಯುತ್ ಸಂಪರ್ಕ ಹಾಗೂ ಕೆಲವೆಡೆ ರಸ್ತೆ ಸಂಪರ್ಕ ಕೂಡ ಕಡಿತಗೊಂಡಿತ್ತು. ಪರಿಸ್ಥಿತಿ ನಿಯಂತ್ರಣಕ್ಕೆ ತರಲು ಹೆಸ್ಕಾಂ ಸಿಬ್ಬಂದಿ, ಪುರಸಭೆ ಸಿಬ್ಬಂದಿ ಹಾಗೂ ಪೊಲೀಸರು ರಾತ್ರಿಯಿಡಿ ಕಾರ್ಯನಿರ್ವಹಿಸಿದರು. ಅವರ ಸೇವೆಗೆ ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದರು.



ಪಟ್ಟಣದ ಸವಣೂರ ರಸ್ತೆಯ ಹೂವಮ್ಮ ಮಲ್ಲಪ್ಪ ಗದ್ದಿ ಅವರ ಮನೆಯ ಮೇಲೆ ಬೃಹತ್ ಮರ ಬಿದ್ದ ಪರಿಣಾಮ ಮನೆಯಲ್ಲಿದ್ದ ವೃದ್ಧೆ, ಮಹಿಳೆ ಮತ್ತು ಮಕ್ಕಳು ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಇಟ್ಟಿಗೆರೆಯ ಅಂಚಿನ ಪ್ರದೇಶದ ನಿವಾಸಿಗಳು ವರ್ಷಗಳಿಂದ ಅನುಭವಿಸುತ್ತಿರುವ ಹಿನ್ನೀರಿನ ಸಮಸ್ಯೆ ಪರಿಹರಿಸಲು ಪುರಸಭೆ ವತಿಯಿಂದ ಕೆರೆ ಅಭಿವೃದ್ಧಿಗಾಗಿ ₹56 ಲಕ್ಷ ವೆಚ್ಚದಲ್ಲಿ ಕೈಗೊಂಡಿದ್ದ ಕಾಮಗಾರಿಗಳು ಮೊದಲ ಮಳೆಯ ಹೊಡೆತಕ್ಕೇ ಕಿತ್ತು ಹೋಗಿವೆ. ನೀರು ಕೆರೆಗೆ ಹರಿದು ಹೋಗಲು ಗುತ್ತಿಗೆದಾರರು ರಾತ್ರಿಯಿಡಿ ಹರಸಾಹಸ ಪಟ್ಟರೂ ಈ ಭಾಗದ ಜನರು ಸಮಸ್ಯೆಯಿಂದ ಹೊರಬರಲಿಲ್ಲ. ಹಾಕಲಾಗಿದ್ದ ಬಂಡು ಒಡೆದು ಹೋಗಿದ್ದರೂ ಯಾವುದೇ ಪ್ರಯೋಜನವಾಗಲಿಲ್ಲ.

ಇನ್ನೂ ಕೆರೆಗೆ ಚರಂಡಿ ಹಾಗೂ ಕೊಳಚೆ ನೀರು ಹರಿದು ಬರುತ್ತಿರುವುದು ಮುಂದುವರಿದಿದ್ದು, ಅವೈಜ್ಞಾನಿಕ ಹಾಗೂ ಕಳಪೆ ಕಾಮಗಾರಿಯಿಂದ ಪುರಸಭೆಯ ಲಕ್ಷಾಂತರ ರೂಪಾಯಿ ಹಣ ಪೋಲಾಗಿರುವುದಾಗಿ ಸಾರ್ವಜನಿಕರು ಆರೋಪಿಸಿದ್ದಾರೆ.

> "ಅವೈಜ್ಞಾನಿಕ ಮತ್ತು ಕಳಪೆ ಕಾಮಗಾರಿಯಿಂದ ಪುರಸಭೆಯ ಲಕ್ಷಾಂತರ ರೂಪಾಯಿ ಹಣ ಪೋಲಾಗಿದ್ದು, ಜನರ ಸಮಸ್ಯೆಯೂ ಪರಿಹಾರವಾಗಿಲ್ಲ, ಈ ಕುರಿತು ಸೂಕ್ತ ತನಿಖೆ ನಡೆಸಿ ಕ್ರಮ ಕೈಗೊಳ್ಳಬೇಕು."
>
> – **ಶರಣು ಗೋಡಿ,** ಜಿಲ್ಲಾಧ್ಯಕ್ಷ, ಕರವೇ ಸ್ವಾಭಿಮಾನಿ ಸೇನೆ



# 'ತಾಂಡಾದ ಸಂತ್ರಸ್ತರಿಗೆ ನೆರವಿನ ಹಸ್ತ'

■ ವಿಜಯಸಾಕ್ಷಿ ಸುದ್ದಿ, ಡಂಬಳ



ಹೋಬಳಿಯ ಡೋಣಿ ತಾಂಡಾದಲ್ಲಿ ಇತ್ತೀಚೆಗೆ ಮಾನಸಿಕ ಅಸ್ವಸ್ಥನೊಬ್ಬ ಮಧ್ಯರಾತ್ರಿ ವೇಳೆ ಮಲಗಿದ್ದ ಕುಟುಂಬಗಳ ಮೇಲೆ ನಡೆಸಿದ ಮಾರಣಾಂತಿಕ ಹಲ್ಲೆಯಿಂದ ಸಂಕಷ್ಟಕ್ಕೀಡಾದ ಕುಟುಂಬಗಳಿಗೆ ಕಾಂಗ್ರೆಸ್ ಮುಖಂಡರು ಹಾಗೂ ರೋಣ ಗ್ಯಾರಂಟಿ ಸಮಿತಿ ಅಧ್ಯಕ್ಷ ಮಿಥುನ್ ಜಿ ಪಾಟೀಲ ಭೇಟಿ ನೀಡಿ ಸಾಂತ್ವನ ಹೇಳಿದರು.

ಘಟನೆಯಲ್ಲಿ ಗಾಯಗೊಂಡು ಮಾನಸಿಕವಾಗಿ ಕುಗ್ಗಿದ ಕುಟುಂಬ ಸದಸ್ಯರೊಂದಿಗೆ ಮಾತನಾಡಿದ ಅವರು, ಅವರ ನೋವಿನಲ್ಲಿ ಭಾಗಿಯಾಗಿ ಧೈರ್ಯ ತುಂಬುವ ಕೆಲಸ ಮಾಡಿದರು.

ಇಂತಹ ಕಠಿಣ ಸಂದರ್ಭಗಳಲ್ಲಿ ಸಮಾಜದ ಪ್ರತಿಯೊಬ್ಬರೂ ಸಂಕಷ್ಟದಲ್ಲಿರುವ ಕುಟುಂಬಗಳ ಬೆಂಬಲಕ್ಕೆ ನಿಲ್ಲಬೇಕು. ಮಾನವೀಯತೆ ಪ್ರದರ್ಶಿಸಿ ಅಗತ್ಯ ಸಹಾಯ ಮಾಡುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದು ಹೇಳಿದರು.

ಕುಟುಂಬಗಳ ಸಮಸ್ಯೆಗಳನ್ನು ಆಲಿಸಿದ ಮಿಥುನ್ ಜಿ.ಪಾಟೀಲ ಅವರು ವೈಯಕ್ತಿಕವಾಗಿ ಆರ್ಥಿಕ ಸಹಾಯ ನೀಡಿ ಮಾನವೀಯತೆ ಮೆರೆದರು. ಮುಂದಿನ ದಿನಗಳಲ್ಲಿಯೂ ಅಗತ್ಯ ಸಹಕಾರ ಹಾಗೂ ನೆರವು ನೀಡುವುದಾಗಿ ಭರವಸೆ ನೀಡಿದರು.

ದುರ್ಘಟನೆಯಿಂದ ಆತಂಕಕ್ಕೊಳಗಾದ ಕುಟುಂಬಗಳಿಗೆ ಧೈರ್ಯ ತುಂಬುವ ನಿಟ್ಟಿನಲ್ಲಿ ಗ್ರಾಮದ ಜನರೂ ಬೆಂಬಲ ವ್ಯಕ್ತಪಡಿಸಿದರು. ದುಃಖಿತ ಕುಟುಂಬಗಳೊಂದಿಗೆ ನಾವು ಸದಾ ಇರುತ್ತೇವೆ ಎಂದು ಗ್ರಾಮಸ್ಥರು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮದ ಹಿರಿಯರಾದ ಅರ್ಜಪ್ಪ ರಾಠೋಡ, ಹನಮಂತಪ್ಪ ರಾಠೋಡ, ಯುವ ಮುಖಂಡ ಬಸವರಡ್ಡಿ ಬಂಡಿಹಾಳ, ಮಾನಪ್ಪ ರಾಠೋಡ, ಕುಬೇರಪ್ಪ ರಾಠೋಡ, ನಂದೆಪ್ಪ ನಾಯಕ, ಪೀರಪ್ಪ ಲಮಾಣಿ, ಕೇಶವ ರಾಠೋಡ, ಗುಂಡಪ್ಪ ಚವ್ಹಾಣ, ನಾಗಪ್ಪ ಚವ್ಹಾಣ, ಮೀರವ್ವ ರಾಠೋಡ ಸೇರಿದಂತೆ ಗ್ರಾಮದ ಹಿರಿಯರು, ಯುವಕರು, ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

# ಭಾರಿ ಬಿರುಗಾಳಿಗೆ ಧರೆಗುರುಳಿದ ಮರಗಳು!



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಕನಕವಾಡ ಗ್ರಾಮದಲ್ಲಿ ಗುರುವಾರ ಸಂಜೆ ಸುರಿದ ಭಾರಿ ಬಿರುಗಾಳಿ ಸಹಿತ ಮಳೆಗೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣ ಹಾಗೂ ರಸ್ತೆ ಬದಿಯಲ್ಲಿದ್ದ ಹಲವು ಮರಗಳು ಧರೆಗುರುಳಿದ ಪರಿಣಾಮ ಕೆಲಕಾಲ ಸಂಚಾರ ಅಸ್ತವ್ಯಸ್ತಗೊಂಡ ಘಟನೆ ನಡೆದಿದೆ.

ಸಂಜೆ ಸುಮಾರು 5.30ರ ವೇಳೆಗೆ ಗುಡುಗು-ಮಿಂಚು ಸಹಿತ ಅರ್ಧ ಗಂಟೆಗೂ ಹೆಚ್ಚು ಕಾಲ ಮಳೆ ಸುರಿದಿದ್ದು, ಭಾರಿ ಗಾಳಿಯ ಅಬ್ಬರಕ್ಕೆ ಮರಗಳು ನೆಲಕ್ಕುರುಳಿವೆ. ಅದೃಷ್ಟವಶಾತ್ ಯಾವುದೇ ಪ್ರಾಣಹಾನಿ ಅಥವಾ ಗಾಯಗಳ ಘಟನೆ ಸಂಭವಿಸಿಲ್ಲ.

ಮಳೆ ಕಡಿಮೆಯಾದ ಬಳಿಕ ಗ್ರಾಮಸ್ಥರು ಹಾಗೂ ಸಾರ್ವಜನಿಕರು ಸ್ಥಳಕ್ಕೆ ಧಾವಿಸಿ ರಸ್ತೆ ಮೇಲೆ ಬಿದ್ದಿದ್ದ ಮರಗಳನ್ನು ತೆರವುಗೊಳಿಸಿದರು. ನಂತರ ವಾಹನ ಸಂಚಾರ ಪುನಃ ಆರಂಭವಾಯಿತು.

### ಮೊಬೈಲ್ ಗೀಳಿನಿಂದ ದೂರವಿರಿ; ಕಾನೂನು ಪಾಲನೆ ರೂಢಿಸಿಕೊಳ್ಳಿ: ಪಿಎಸ್ಐ ನಾಗರಾಜ ಗಡದ

# ಸಾಧನೆಗೆ ಶಿಸ್ತು, ಏಕಾಗ್ರತೆಯೇ ಅಡಿಪಾಯ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿದ್ಯಾರ್ಥಿ ಜೀವನವೇ ಬದುಕಿನ ಮಹತ್ವದ ಘಟ್ಟವಾಗಿದ್ದು, ಈ ಹಂತದಲ್ಲಿ ಶಿಸ್ತು, ಏಕಾಗ್ರತೆ ಮತ್ತು ಕಠಿಣ ಪರಿಶ್ರಮ ರೂಢಿಸಿಕೊಂಡರೆ ಮಾತ್ರ ಜೀವನದಲ್ಲಿ ಯಶಸ್ಸು ಸಾಧಿಸಲು ಸಾಧ್ಯ ಎಂದು ಪಿಎಸ್ಐ ನಾಗರಾಜ ಗಡದ ಹೇಳಿದರು.

ಪಟ್ಟಣದ ಉಮಾವಿದ್ಯಾಲಯ ಹೈಸ್ಕೂಲ್‌ನಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಅಭಿಮಾನಿ ಬಳಗದಿಂದ 2026-27ನೇ ಸಾಲಿನ ಕನ್ನಡ ಮಾಧ್ಯಮದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಂಡಿರುವ ಉಚಿತ ಪಠ್ಯವಿಷಯ ಸಂಪೂರ್ಣತಾ ಶಿಬಿರದಲ್ಲಿ ಅವರು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.

ವಿದ್ಯಾರ್ಥಿಗಳು ಮನಸ್ಸು ಮತ್ತು ಮೆದುಳನ್ನು ತಮ್ಮ ಹತೋಟಿಯಲ್ಲಿ ಇಟ್ಟುಕೊಳ್ಳಬೇಕು. ಸತತ ಅಭ್ಯಾಸ, ಕಠಿಣ ಪರಿಶ್ರಮ ಹಾಗೂ ನಿಯಮಿತ ಹಾಜರಾತಿ ಯಶಸ್ಸಿನ ಗುಟ್ಟು. ಮೊಬೈಲ್ ಅನ್ನು ಅಗತ್ಯವಿದ್ದಾಗ ಮಾತ್ರ ಬಳಸಬೇಕು. ಕಾನೂನು ಮೀರಿ ನಡೆದುಕೊಳ್ಳಬಾರದು. ವಾಹನ ಚಲಾಯಿಸುವವರು ಚಾಲನಾ ಪರವಾನಗಿ ಹೊಂದಿರಬೇಕು. ಅಪ್ರಾಪ್ತರು ವಾಹನ ಚಾಲನೆ ಮಾಡಬಾರದು ಎಂದು ಅವರು ಕಿವಿಮಾತು ಹೇಳಿದರು.

ಕಳೆದ ಎರಡು ತಿಂಗಳಿಂದ ನಡೆಯುತ್ತಿರುವ ಈ ಶಿಬಿರದಲ್ಲಿ ಲಕ್ಷ್ಮೇಶ್ವರ ಹಾಗೂ ಸುತ್ತಮುತ್ತಲಿನ ಗ್ರಾಮಗಳ ವಿದ್ಯಾರ್ಥಿಗಳು ಭಾಗವಹಿಸುತ್ತಿದ್ದು, ಗಣಿತ, ವಿಜ್ಞಾನ ಹಾಗೂ ಇಂಗ್ಲಿಷ್ ವಿಷಯಗಳಲ್ಲಿ ಪರಿಣಿತ ಶಿಕ್ಷಕರು ಪಾಠ ಮಾಡುತ್ತಿದ್ದಾರೆ.

ಡಾ. ಚಂದ್ರು ಲಮಾಣಿ ಅಭಿಮಾನಿ ಬಳಗದ ಉಚಿತ ಶಿಕ್ಷಣ ಸೇವೆ ಶ್ಲಾಘನೀಯವಾಗಿದ್ದು, ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ಕೆ.ಆರ್. ಲಮಾಣಿ ಹಾಗೂ ಸಂಪನ್ಮೂಲ ವ್ಯಕ್ತಿಗಳು ಉಪಸ್ಥಿತರಿದ್ದರು.

> "ಸಾಧನೆ ಎನ್ನುವುದು ಸಾಧಕರ ಸೊತ್ತು, ಸೋಮಾರಿಗಳ ಸ್ವತ್ತಲ್ಲ. ಸತತ ಅಭ್ಯಾಸ, ಕಠಿಣ ಪರಿಶ್ರಮ ಮತ್ತು ಏಕಾಗ್ರತೆಯಿಂದ ಮಾತ್ರ ಯಶಸ್ಸು ಸಾಧ್ಯ."
>
> – **ನಾಗರಾಜ ಗಡದ, ಪಿಎಸ್ಐ**

# ಕಾಳಸಂತೆಯಲ್ಲಿ ಎಲ್‌ಪಿಜಿ ಸಿಲಿಂಡರ್ ಮಾರಾಟ! ?

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ




ಪಟ್ಟಣ ಹಾಗೂ ತಾಲೂಕಿನ ವಿವಿಧ ಭಾಗಗಳಲ್ಲಿ ಎಲ್‌ಪಿಜಿ ಗ್ಯಾಸ್ ಸಿಲಿಂಡರ್‌ಗಳನ್ನು ಕಾಳಸಂತೆಯಲ್ಲಿ ಹೆಚ್ಚುವರಿ ದರಕ್ಕೆ ಮಾರಾಟ ಮಾಡುತ್ತಿರುವುದನ್ನು ತಡೆಗಟ್ಟುವಂತೆ ಆಗ್ರಹಿಸಿ ಭಾರತ ಕಮ್ಯುನಿಸ್ಟ್ ಪಕ್ಷ (ಮಾರ್ಕ್ಸ್‌ವಾದಿ) ಸಮಿತಿಯವರು ತಹಸೀಲ್ದಾರ್ ಆರ್. ಕವಿತಾ ಅವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಸಿಪಿಐ(ಎಂ) ಜಿಲ್ಲಾ ಕಾರ್ಯದರ್ಶಿ ಆರ್.ಎಸ್. ಬಸವರಾಜ್, ಇರಾನ್, ಇಸ್ರೇಲ್ ಹಾಗೂ ಅಮೆರಿಕ ದೇಶಗಳ ನಡುವಿನ ಯುದ್ಧದ ನೆಪವೊಡ್ಡಿ ಕೆಲ ಗ್ಯಾಸ್ ಮಾರಾಟಗಾರರು ಗ್ರಾಹಕರಿಂದ ಹೆಚ್ಚುವರಿ ಹಣ ವಸೂಲಿ ಮಾಡುತ್ತಿದ್ದಾರೆ. ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದಲೇ ಸಂಕಷ್ಟದಲ್ಲಿರುವ ಸಾರ್ವಜನಿಕರಿಗೆ ಗ್ಯಾಸ್ ಸಿಲಿಂಡರ್ ದರ ಏರಿಕೆಯೂ ಹೆಚ್ಚುವರಿ ಹೊರೆ ತಂದಿದೆ ಎಂದು ಆರೋಪಿಸಿದರು.

ತಾಲೂಕು ಕಾರ್ಯದರ್ಶಿ ಬಿ. ಮಾಳಮ್ಮ ಮಾತನಾಡಿ, ಗ್ಯಾಸ್ ಏಜೆನ್ಸಿಗಳ ಕಚೇರಿಗಳ ಮುಂದೆ ಗ್ರಾಹಕರು ಸಾಲುಗಟ್ಟಿ ನಿಂತು ಬುಕ್ಕಿಂಗ್ ಮಾಡುತ್ತಿದ್ದರೂ ಹಲವು ದಿನಗಳಾದರೂ ಸಿಲಿಂಡರ್ ಪೂರೈಕೆ ಆಗುತ್ತಿಲ್ಲ. ಈ ಪರಿಸ್ಥಿತಿಯನ್ನು ದುರುಪಯೋಗಪಡಿಸಿಕೊಂಡು ಕಾಳಸಂತೆಯಲ್ಲಿ ₹2500ಕ್ಕೂ ಅಧಿಕ ದರಕ್ಕೆ ಸಿಲಿಂಡರ್ ಮಾರಾಟ ಮಾಡಲಾಗುತ್ತಿದೆ ಎಂದು ದೂರಿದರು.

ಸಿಪಿಐ(ಎಂ) ತಾಲೂಕು ಅಧ್ಯಕ್ಷ ಎಸ್. ಜಗನ್ನಾಥ್ ಮಾತನಾಡಿ, ಗ್ಯಾಸ್ ಏಜೆನ್ಸಿ ಮಾಲೀಕರು ಹಾಗೂ ಕೆಲ ಅಧಿಕಾರಿಗಳ ಶಾಮೀಲಿನಿಂದ ಈ ದಂಧೆ ನಡೆಯುತ್ತಿದೆ. ತಾಲೂಕು ಆಡಳಿತ ಕೂಡಲೇ ಮಧ್ಯಪ್ರವೇಶಿಸಿ ಕಾಳಸಂತೆ ತಡೆಗಟ್ಟಬೇಕು ಹಾಗೂ ಜನರಿಗೆ ಸುಲಭವಾಗಿ ಸಿಲಿಂಡರ್ ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಕೆ. ರಮೇಶ್, ಎಂ. ಆನಂದ, ದುರುಗಮ್ಮ, ಪಿ. ಚಾಂದಭಿ, ನಾಗಮ್ಮ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> "ಸರ್ಕಾರದ ನಿಯಮಾನುಸಾರ ಡಿಎಸಿ ಸಂಖ್ಯೆ ಬಂದ ಬಳಿಕವೇ ಗ್ಯಾಸ್ ಸಿಲಿಂಡರ್ ವಿತರಣೆ ಮಾಡಲಾಗುತ್ತಿದೆ. ಕಾಳಸಂತೆಯಲ್ಲಿ ಯಾರು ಮಾರಾಟ ಮಾಡುತ್ತಿದ್ದಾರೆ ಎಂಬ ಮಾಹಿತಿ ನಮಗೆ ಇಲ್ಲ. ದೂರು ಬಂದಲ್ಲಿ ಪರಿಶೀಲಿಸಿ ಕಠಿಣ ಕ್ರಮ ಕೈಗೊಳ್ಳಲಾಗುವುದು."
>
> – ಗ್ಯಾಸ್ ಏಜೆನ್ಸಿ / ಆಹಾರ ಇಲಾಖೆ ಅಧಿಕಾರಿಗಳು

### ಕೊಲೆ ಯತ್ನ, ಗಾಂಜಾ ಮಾರಾಟ, ಗಲಭೆ ಪ್ರಕರಣಗಳ ಐವರು ಆರೋಪಿಗಳ ವಿರುದ್ಧ ಖಡಕ್ ಕ್ರಮ

# ಸಮಾಜಘಾತುಕರಿಗೆ ಪೊಲೀಸರ ಗಡಿಪಾರು ಶಾಕ್..!







■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿನ ಅಪರಾಧ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಗದಗ ಪೊಲೀಸರು ಕಠಿಣ ಕ್ರಮ ಕೈಗೊಂಡಿದ್ದು, ಕೊಲೆ ಯತ್ನ, ಗಲಭೆ, ಗಾಂಜಾ ಮಾರಾಟ, ಬೆದರಿಕೆ ಸೇರಿದಂತೆ ವಿವಿಧ ಗಂಭೀರ ಪ್ರಕರಣಗಳಲ್ಲಿ ಭಾಗಿಯಾಗಿದ್ದ ಐವರು ಆರೋಪಿಗಳನ್ನು ಜಿಲ್ಲೆಯಿಂದ ಗಡಿಪಾರು ಮಾಡಿದ್ದಾರೆ.

ಸಮಾಜದಲ್ಲಿ ಭಯದ ವಾತಾವರಣ ಸೃಷ್ಟಿಸುತ್ತಿದ್ದ ಆರೋಪಿಗಳ ವಿರುದ್ಧ ಪೊಲೀಸ್ ಇಲಾಖೆ ಕೈಗೊಂಡಿರುವ ಈ ಕ್ರಮ ಇದೀಗ ಜಿಲ್ಲೆಯಾದ್ಯಂತ ಚರ್ಚೆಗೆ ಗ್ರಾಸವಾಗಿದೆ.

ಜಿಲ್ಲೆಯ ವಿವಿಧ ಪೊಲೀಸ್ ಠಾಣೆಗಳಲ್ಲಿ ಹಲವು ಪ್ರಕರಣಗಳಲ್ಲಿ ಭಾಗಿಯಾಗಿದ್ದ ನರಗುಂದದ ದವನಪ್ಪ, ದಾವಲಸಾಬ್, ಮುಸ್ತಾಕ್, ಅಭಿಷೇಕ್ ಹಾಗೂ ಸಾಹಿಲ್ ವಿರುದ್ಧ ಗಡಿಪಾರು ಆದೇಶ ಜಾರಿಗೊಳಿಸಲಾಗಿದೆ.

ಆರೋಪಿಗಳ ವಿರುದ್ಧ ಕೊಲೆ ಯತ್ನ, ಹಲ್ಲೆ, ಗಲಭೆ, ಎಸ್ಸಿ/ಎಸ್ಟಿ ದೌರ್ಜನ್ಯ, ಗಾಂಜಾ ಮಾರಾಟ, ಸಾರ್ವಜನಿಕ ಶಾಂತಿ ಭಂಗ ಸೇರಿದಂತೆ ಹಲವು ಗಂಭೀರ ಪ್ರಕರಣಗಳು ದಾಖಲಾಗಿದ್ದವು.

ನರಗುಂದದ ದವನಪ್ಪ ವಿರುದ್ಧ 2017ರಿಂದಲೇ ಗಂಭೀರ ಪ್ರಕರಣಗಳು ದಾಖಲಾಗಿದ್ದು, ಗಲಭೆ, ಹಲ್ಲೆ ಹಾಗೂ ಬೆದರಿಕೆ ಪ್ರಕರಣಗಳಲ್ಲಿ ಭಾಗಿಯಾಗಿದ್ದ ಆರೋಪ ಕೇಳಿಬಂದಿದೆ.

ದಾವಲಸಾಬ್ ವಿರುದ್ಧ ಎನ್‌ಡಿಪಿಎಸ್ ಕಾಯ್ದೆಯಡಿ ಗಾಂಜಾ ಸಾಗಾಟ ಮತ್ತು ಮಾರಾಟ ಪ್ರಕರಣಗಳು ದಾಖಲಾಗಿವೆ.

ಮುಸ್ತಾಕ್ ವಿರುದ್ಧ ಗದಗ ನಗರ ಪೊಲೀಸ್ ಠಾಣೆಯಲ್ಲಿ ಹಲ್ಲೆ, ಬೆದರಿಕೆ ಹಾಗೂ ಎಸ್ಸಿ/ಎಸ್ಟಿ ಕಾಯ್ದೆಯಡಿ ಪ್ರಕರಣಗಳು ದಾಖಲಾಗಿದ್ದರೆ, ಅಭಿಷೇಕ್ ಮತ್ತು ಸಾಹಿಲ್ ವಿರುದ್ಧವೂ ಸಾರ್ವಜನಿಕ ಶಾಂತಿ ಭಂಗ ಹಾಗೂ ಅಪರಾಧ ಚಟುವಟಿಕೆಗಳಿಗೆ ಸಂಬಂಧಿಸಿದ ಪ್ರಕರಣಗಳು ದಾಖಲಾಗಿದ್ದವು.

ಸಮಾಜದ ಶಾಂತಿ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ತಿಳಿಸಿದ್ದು, ಸಮಾಜ ವಿರೋಧಿ ಚಟುವಟಿಕೆಗಳಲ್ಲಿ ತೊಡಗುವವರ ವಿರುದ್ಧ ಮುಂದೆಯೂ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

> "ಸಮಾಜದಲ್ಲಿ ಭಯದ ವಾತಾವರಣ ಸೃಷ್ಟಿಸುವ ಸಮಾಜಘಾತುಕ ಶಕ್ತಿಗಳ ವಿರುದ್ಧ ಮುಂದೆಯೂ ನಿರ್ದಾಕ್ಷಿಣ್ಯ ಕ್ರಮ ಮುಂದುವರಿಯಲಿದೆ."
>
> – **ರೋಹನ್ ಜಗದೀಶ್,** ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

# ಇಂದು 'ಜೀವನ ದರ್ಶನ'- ಪ್ರತಿಭಾ ಪುರಸ್ಕಾರ ಸಮಾರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿವೇಕಾನಂದ ನಗರದ ಕಾಶೀ ವಿಶ್ವನಾಥ ದೇವಸ್ಥಾನದ ಶ್ರೀ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಭವನದಲ್ಲಿ ಶ್ರೀ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿ (ರಿ) ವತಿಯಿಂದ ಮೇ 16ರಂದು ಸಂಜೆ 6.30ಕ್ಕೆ 58ನೇ ಜೀವನ ದರ್ಶನ, ಶ್ರೀ ಕಾಶೀ ವಿಶ್ವನಾಥನ ಪಾಲಕಿ ಸೇವೆ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಸಾನಿಧ್ಯವನ್ನು ಬನ್ನಿಕೊಪ್ಪ-ಮೈಸೂರು ಅರಮನೆ ಜಪದ ಕಟ್ಟೆಮಠದ ಪೂಜ್ಯ ಡಾ. ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ ವಹಿಸಲಿದ್ದಾರೆ.

ನಿವೃತ್ತ ಪ್ರಾಚಾರ್ಯ ಡಾ. ಉಮೇಶ ಪುರದ ಅವರು "ವೃದ್ಧಾಪ್ಯದಲ್ಲಿ ಆರೋಗ್ಯ ಸಂರಕ್ಷಣೆ" ವಿಷಯ ಕುರಿತು ಉಪನ್ಯಾಸ ನೀಡಲಿದ್ದಾರೆ. ಸಮಿತಿಯ ಅಧ್ಯಕ್ಷ ಎ.ಟಿ. ನರೇಗಲ್ಲ ಅಧ್ಯಕ್ಷತೆ ವಹಿಸಲಿದ್ದು, ಉಪಾಧ್ಯಕ್ಷ ಆರ್.ಆರ್. ಕಾಶಪ್ಪನವರ ಉಪಸ್ಥಿತರಿರುವರು.

ಪ್ರಸಾದ ಸೇವೆಯನ್ನು ಶಿಕ್ಷಕ ಎನ್.ವಿ. ಪಾಟೀಲ, ಸಮಿತಿಯ ಕಾರ್ಯದರ್ಶಿ ಕೆ.ಪಿ. ಗುಳಗೌಡರ, ಕೋಶಾಧ್ಯಕ್ಷ ಎಸ್.ಎಸ್. ಪಾಳೇಗಾರ ಹಾಗೂ ಬಿಎಸ್‌ಎನ್‌ಎಲ್ ನಿವೃತ್ತ ನೌಕರರಾದ ಶ್ರೀಮತಿ ನಿರ್ಮಲಾ ಪಾಟೀಲ ವಹಿಸಿಕೊಂಡಿದ್ದಾರೆ.

ಇದೇ ವೇಳೆ 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ, ಸಿಬಿಎಸ್‌ಇ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಶೇ. 90ಕ್ಕಿಂತ ಹೆಚ್ಚು ಅಂಕ ಪಡೆದ ವಿವೇಕಾನಂದ ನಗರದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವುದು.

ಕಾರ್ಯಕ್ರಮಕ್ಕೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಶ್ರೀ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿಯ ಕಾರ್ಯದರ್ಶಿ ಕೆ.ಪಿ. ಗುಳಗೌಡರ ಮನವಿ ಮಾಡಿದ್ದಾರೆ.

### ಗ್ರಾಮೀಣ ಮಕ್ಕಳಿಗೆ ವೇದಿಕೆ ಕಲ್ಪಿಸಿ ಸಾಂಸ್ಕೃತಿಕ ಪರಂಪರೆ ಉಳಿಸುತ್ತಿರುವ ನಟರಂಗ ಸಂಸ್ಥೆ: ಕೃಷ್ಣಗೌಡ ಪಾಟೀಲ

# 'ಮಕ್ಕಳ ಕಲರವ'ದಲ್ಲಿ ಕಲೆ-ಸಂಸ್ಕೃತಿಯ ಸಂಭ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಸಾಂಸ್ಕೃತಿಕ ಪರಿಸರವನ್ನು ಜೀವಂತವಾಗಿರಿಸುವಲ್ಲಿ ಸೋಮಶೇಖರ ಚಿಕ್ಕಮಠ ನೇತೃತ್ವದ ನಟರಂಗ ಸಂಸ್ಥೆಯ ಪಾತ್ರ ಅಪಾರವಾಗಿದೆ ಎಂದು ಕಾಂಗ್ರೆಸ್ ಯುವ ಘಟಕದ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಹೇಳಿದರು.

ನಗರದ ಪಂ. ಭೀಮಸೇನ್ ಜೋಶಿ ರಂಗಮಂದಿರದಲ್ಲಿ ಗುರುವಾರ ನಟರಂಗ ಕಲ್ಚರಲ್ ಅಕಾಡೆಮಿ ಮತ್ತು ಟ್ರಸ್ಟ್ ವತಿಯಿಂದ ಆಯೋಜಿಸಿದ್ದ 'ಮಕ್ಕಳ ಕಲರವ-2026' ಬೇಸಿಗೆ ಶಿಬಿರದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ, ಸಂಸ್ಥೆಯ ದಶಮಾನೋತ್ಸವದ ಲೋಗೋ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ನಟರಂಗ ಸಂಸ್ಥೆ ಗ್ರಾಮೀಣ ಭಾಗದ ಮಕ್ಕಳ ಪ್ರತಿಭಾ ಪ್ರದರ್ಶನಕ್ಕೂ ಉತ್ತಮ ವೇದಿಕೆ ಕಲ್ಪಿಸಿದೆ. ಸಂಸ್ಥೆಯ ಚಟುವಟಿಕೆಗಳನ್ನು ಇನ್ನಷ್ಟು ವಿಸ್ತರಿಸಲು ಸ್ವಂತ ಜಾಗದ ಅಗತ್ಯವಿದೆ ಎಂಬುದನ್ನು ಪದಾಧಿಕಾರಿಗಳು ಗಮನಕ್ಕೆ ತಂದಿದ್ದಾರೆ. ಈ ಕುರಿತು ಸಂಬಂಧಪಟ್ಟವರ ಗಮನ ಸೆಳೆದು ಸಂಸ್ಥೆಗೆ ಜಾಗ ಒದಗಿಸಲು ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಅತಿಥಿಯಾಗಿ ಪಾಲ್ಗೊಂಡಿದ್ದ ಪ್ರೀತಿ ಹೊನಗುಡಿ ಮಾತನಾಡಿ, ಉತ್ತರ ಕರ್ನಾಟಕವು ಕಲೆಯ ತವರೂರು. ಇಂದಿನ ಮೊಬೈಲ್ ಯುಗದಲ್ಲೂ ಜನಪದ ಹಾಗೂ ಕಲಾ ಸಂಸ್ಕೃತಿಯನ್ನು ಜನರು ಪೋಷಿಸುತ್ತಿರುವುದಕ್ಕೆ ನಟರಂಗ ಸಂಸ್ಥೆಯ ಈ ಅದ್ದೂರಿ ಕಾರ್ಯಕ್ರಮವೇ ಸಾಕ್ಷಿಯಾಗಿದೆ ಎಂದರು.



ಬೇಸಿಗೆ ಶಿಬಿರದ ಮೂಲಕ ಮಕ್ಕಳಲ್ಲಿನ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸುವ ಕೆಲಸ ಶ್ಲಾಘನೀಯವಾಗಿ ನಡೆಯುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಖ್ಯಾತ ವೈದ್ಯ ಡಾ. ಎಸ್.ವಿ. ಶಿವನಗೌಡ ಮಾತನಾಡಿ, ನಟರಂಗ ಸಂಸ್ಥೆಯ ತರಬೇತುದಾರರು ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರತಿಭೆಗಳನ್ನು ಹೊರತರುತ್ತಿದ್ದಾರೆ. ಇಲ್ಲಿ ತರಬೇತಿ ಪಡೆದ ಅನೇಕ ಮಕ್ಕಳು ಇಂದು ದೊಡ್ಡ ವೇದಿಕೆಗಳಲ್ಲಿ ಮಿಂಚುತ್ತಿರುವುದು ಹೆಮ್ಮೆಯ ಸಂಗತಿ. ಈ ಸಂಸ್ಥೆ ಮತ್ತಷ್ಟು ಹೆಮ್ಮರವಾಗಿ ಬೆಳೆಯಲಿ ಎಂದು ಹಾರೈಸಿದರು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ಅಡ್ನೂರು-ರಾಜೂರ-ಗದಗ ಬೃಹನ್ಮಠದ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮೀಜಿ ಆಶೀರ್ವಚನ ನೀಡಿ, ನಟರಂಗ ಸಂಸ್ಥೆ ಸಮಾಜಕ್ಕೆ ಉತ್ತಮ ಕಲಾವಿದರನ್ನು ನೀಡುತ್ತಿರುವುದು ಶ್ಲಾಘನೀಯ ಕಾರ್ಯ ಎಂದರು.

ಪಂ. ಪಂಚಾಕ್ಷರ ಗವಾಯಿಗಳು ಹಾಗೂ ಪುಟ್ಟರಾಜ ಗವಾಯಿಗಳಂತಹ ಮಹಾನ್ ಪ್ರತಿಭೆಗಳು ಮತ್ತೆ ಈ ನೆಲದಲ್ಲಿ ಮೂಡಿಬರಬೇಕಾದರೆ ಇಂತಹ ಸಂಸ್ಥೆಗಳಿಗೆ ಸ್ವಂತ ನೆಲೆ ಅಗತ್ಯವಾಗಿದೆ. ಸರ್ಕಾರ ಜನಪರ ಸಂಸ್ಥೆಗಳಿಗೆ ಸೂಕ್ತ ಆಶ್ರಯ ನೀಡಬೇಕು ಎಂದು ಹೇಳಿದರು.

> "ಗ್ರಾಮೀಣ ಮಕ್ಕಳ ಪ್ರತಿಭೆಗೆ ವೇದಿಕೆ ಕಲ್ಪಿಸಿ, ಉತ್ತರ ಕರ್ನಾಟಕದ ಕಲಾ ಸಂಸ್ಕೃತಿಯನ್ನು ಜೀವಂತವಾಗಿರಿಸಿರುವುದು ನಟರಂಗ ಸಂಸ್ಥೆಯ ದೊಡ್ಡ ಸಾಧನೆ."
> – **ಕೃಷ್ಣಗೌಡ ಪಾಟೀಲ,** ಯುವ ಕಾಂಗ್ರೆಸ್ ಘಟಕದ ಜಿಲ್ಲಾ ಅಧ್ಯಕ್ಷ

ವೇದಿಕೆಯ ಮೇಲೆ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ನಂದಾ ಹಣಬರಹಟ್ಟಿ, ರಂಗಕರ್ಮಿ ಮಹಾಂತೇಶ ಗಜೇಂದ್ರಗಡ, ತೋಂಟದಾರ್ಯ ಮಠದ ಆಡಳಿತಾಧಿಕಾರಿ ಎಸ್.ಎಸ್. ಪಟ್ಟಣಶೆಟ್ಟರ್, ಉದ್ಯಮಿ ಕಿರಣ ಬೂಮಾ, ಎಚ್.ಎಸ್. ಶಿವನಗೌಡ್ರ, ಶರಣಬಸಪ್ಪ ಗುಡುಮನಿ, ಜಿ.ಬಿ. ಪಾಟೀಲ, ಮುತ್ತಣ್ಣ ಮುಶಿಗೇರಿ, ವಿಜಯಕುಮಾರ ಹಿರೇಮಠ, ವಿಜಯಲಕ್ಷ್ಮೀ ಮಾನ್ವಿ, ಚಂದ್ರು ಹರಿಜನ, ಬಾಬು ನರಸಾಪುರ, ನಾಗರತ್ನಾ ಚಿಕ್ಕಮಠ, ರಾಮಚಂದ್ರ ಬಳ್ಳಾರಿ, ಮಹೇಶ ಕರಿಬಿಷ್ಟಿ, ನಟರಂಗ ಅಕಾಡೆಮಿಯ ಅಧ್ಯಕ್ಷ ಸೋಮಶೇಖರ ಚಿಕ್ಕಮಠ, ಪೂಜಾ ಚಿಕ್ಕಮಠ ಹಾಗೂ ಸಂಗೀತಾ ಶಿಗ್ಗಾಂವಿ ಉಪಸ್ಥಿತರಿದ್ದರು.

ರಾಹುಲ್ ರಾಠೋಡ ಪ್ರಾರ್ಥಿಸಿದರು. ಪತ್ರಕರ್ತ ಆನಂದಯ್ಯ ವಿರಕ್ತಮಠ ಕಾರ್ಯಕ್ರಮ ನಿರೂಪಿಸಿದರು. ಶಿಬಿರದ ಮಕ್ಕಳಿಂದ ನಡೆದ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ಜನಮನ ಸೆಳೆದವು.

### ಒಂದೇ ಕೇಂದ್ರದಲ್ಲಿ ಭಾರೀ ಫಲಿತಾಂಶ ಏರಿಕೆ; ತನಿಖೆ ನಡೆಸುವಂತೆ ಬಿಜೆಪಿ ಆಗ್ರಹ

# ಕೆಸಿಇಟಿ ಕೃಷಿ ಪರೀಕ್ಷೆಯಲ್ಲಿ 'ಹಿರಿಯೂರು ಮಾಯೆ'..?

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಇತ್ತೀಚೆಗೆ ನಡೆದ ಕೆಸಿಇಟಿ ಕೃಷಿ ಪ್ರಾಯೋಗಿಕ ಪರೀಕ್ಷೆಯಲ್ಲಿ ಭಾರೀ ಅಕ್ರಮ ನಡೆದಿರುವ ಶಂಕೆ ವ್ಯಕ್ತವಾಗಿದ್ದು, ಕೂಡಲೇ ರಾಜ್ಯ ಸರ್ಕಾರ ಸಮಗ್ರ ತನಿಖೆ ನಡೆಸಬೇಕು ಎಂದು ಗದಗ ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಲ್ಲಾಪೂರ ಆಗ್ರಹಿಸಿದ್ದಾರೆ.

ರೈತರ ಮಕ್ಕಳಿಗಾಗಿ ಕೃಷಿ ಕೋಟಾದಡಿ ಬಿ.ಎಸ್‌ಸಿ ಕೃಷಿ, ತೋಟಗಾರಿಕೆ, ಅರಣ್ಯ ಹಾಗೂ ಪಶುವೈದ್ಯಕೀಯ ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು ರಾಜ್ಯದ 17 ಕೇಂದ್ರಗಳಲ್ಲಿ ಪ್ರಾಯೋಗಿಕ ಪರೀಕ್ಷೆ ನಡೆಸಲಾಗಿತ್ತು. ಆದರೆ ರಾಜ್ಯದ 16 ಕೇಂದ್ರಗಳಲ್ಲಿ ಸರಾಸರಿ ಫಲಿತಾಂಶ ಶೇ. 30ರಷ್ಟಿದ್ದರೆ, ಹಿರಿಯೂರು ಹಾರ್ಟಿಕಲ್ಚರ್ ಕಾಲೇಜಿನ ಕೇಂದ್ರದಲ್ಲೇ ಶೇ. 70ರಷ್ಟು ಫಲಿತಾಂಶ ಬಂದಿರುವುದು ಅನುಮಾನಕ್ಕೆ ಕಾರಣವಾಗಿದೆ ಎಂದು ಆರೋಪಿಸಿದ್ದಾರೆ.



ಹಿರಿಯೂರು ಕೇಂದ್ರದಲ್ಲಿ ಪರೀಕ್ಷೆ ಬರೆದ 2143 ವಿದ್ಯಾರ್ಥಿಗಳಲ್ಲಿ 74 ಮಂದಿ 200ಕ್ಕೆ 200 ಅಂಕ ಪಡೆದಿದ್ದರೆ, ರಾಜ್ಯದ ಉಳಿದ 16 ಕೇಂದ್ರಗಳಲ್ಲಿ ಪರೀಕ್ಷೆ ಬರೆದ 22,211 ವಿದ್ಯಾರ್ಥಿಗಳಲ್ಲಿ ಕೇವಲ 21 ವಿದ್ಯಾರ್ಥಿಗಳು ಮಾತ್ರ ಪೂರ್ಣ ಅಂಕ ಗಳಿಸಿದ್ದಾರೆ ಎಂದು ತಿಳಿಸಿದ್ದಾರೆ.

ಬೆಂಗಳೂರು ಜಿಕೆವಿಕೆ ಕೃಷಿ ಕಾಲೇಜು, ಕೋಲಾರದ ತೋಟಗಾರಿಕೆ ಕಾಲೇಜು, ಧಾರವಾಡ, ಕಲಬುರ್ಗಿ, ಮಂಡ್ಯ ಹಾಗೂ ಬಾಗಲಕೋಟೆ ಕೇಂದ್ರಗಳಲ್ಲಿ ಅಲ್ಪ ಸಂಖ್ಯೆಯ ವಿದ್ಯಾರ್ಥಿಗಳು ಮಾತ್ರ ಪೂರ್ಣ ಅಂಕ ಗಳಿಸಿರುವುದಾಗಿ ಹೇಳಿದ ಅವರು, ಹಾಸನ, ವಿಜಯಪುರ, ರಾಯಚೂರು, ಶಿವಮೊಗ್ಗ, ಬೀದರ್, ಹೆಬ್ಬಾಳ, ಮಂಗಳೂರು, ಮೈಸೂರು, ಮುನಿರಾಬಾದ್ ಹಾಗೂ ಅರಭಾವಿ ಕೇಂದ್ರಗಳಲ್ಲಿ ಒಬ್ಬ ವಿದ್ಯಾರ್ಥಿಯೂ 200 ಅಂಕ ಪಡೆದಿಲ್ಲ ಎಂದು ವಿವರಿಸಿದ್ದಾರೆ.

> "ಒಂದೇ ಪರೀಕ್ಷೆಗೆ ಒಂದು ಕೇಂದ್ರದಲ್ಲಿ ಮಾತ್ರ ಅಸಾಮಾನ್ಯ ಫಲಿತಾಂಶ ಬಂದಿರುವುದು ಗಂಭೀರ ಅನುಮಾನಕ್ಕೆ ಕಾರಣವಾಗಿದೆ; ರೈತರ ಮಕ್ಕಳ ಹಿತದೃಷ್ಟಿಯಿಂದ ಸರ್ಕಾರ ತಕ್ಷಣ ತನಿಖೆ ನಡೆಸಬೇಕು."
> – **ಲಿಂಗರಾಜ ಪಾಟೀಲ ಮಲ್ಲಾಪೂರ,** ಪ್ರಧಾನ ಕಾರ್ಯದರ್ಶಿ

ಹಿರಿಯೂರು ಕೇಂದ್ರದಲ್ಲಿ ಮಾತ್ರ 170ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಅಸಾಮಾನ್ಯವಾಗಿ ಹೆಚ್ಚಿದ್ದು, ರಾಜ್ಯದ ಒಟ್ಟು ಕೃಷಿ ಕಾಲೇಜುಗಳಲ್ಲಿ ಸುಮಾರು 3 ಸಾವಿರ ಸೀಟುಗಳಿರುವ ಸಂದರ್ಭದಲ್ಲಿ ಉಳಿದ ರೈತರ ಮಕ್ಕಳಿಗೆ ಅನ್ಯಾಯವಾಗುವ ಸಾಧ್ಯತೆ ಇದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ಪರೀಕ್ಷಾ ಫಲಿತಾಂಶವನ್ನು ತಕ್ಷಣ ರದ್ದುಗೊಳಿಸಿ ಅಕ್ರಮದ ಕುರಿತು ಸಮಗ್ರ ತನಿಖೆ ನಡೆಸಬೇಕು. ತನಿಖೆಯಲ್ಲಿ ಅಕ್ರಮ ಸಾಬೀತಾದರೆ ರಾಜ್ಯಾದ್ಯಂತ ಏಕ ಮಾದರಿಯ ಪ್ರಶ್ನೆ ಪತ್ರಿಕೆಯಿಂದ ಮರು ಪರೀಕ್ಷೆ ನಡೆಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಲ್ಲಿ ಬೇರೆ ಬೇರೆ ಮಾದರಿಯ ಪ್ರಶ್ನೆ ಪತ್ರಿಕೆ ನೀಡುವುದನ್ನು ನಿಲ್ಲಿಸಿ, ಇಡೀ ರಾಜ್ಯಕ್ಕೆ ಒಂದೇ ಮಾದರಿಯ ಪ್ರಶ್ನೆ ಪತ್ರಿಕೆ ಅನ್ವಯಿಸುವಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಸರ್ಕಾರ ನಿರ್ದೇಶನ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

### ಆರೋಗ್ಯ ಕೇಂದ್ರದಿಂದ ಡಿಜಿಟಲ್ ಲೈಬ್ರರಿ ತನಕ ಭುವನೇಶ ಪಾಟೀಲ ಪರಿಶೀಲನೆ

# ಮುಕ್ಕಲ ಗ್ರಾಮದಲ್ಲಿ ಸಿಇಒ ಪರಿಶೀಲನೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ್ ಪಾಟೀಲ ಅವರು ಕಲಘಟಗಿ ತಾಲೂಕಿನ ಮುಕ್ಕಲ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಿವಿಧ ಸರ್ಕಾರಿ ಕಚೇರಿಗಳು ಹಾಗೂ ಯೋಜನೆಗಳ ಪ್ರಗತಿಯನ್ನು ಪರಿಶೀಲಿಸಿದರು.

ಮೇ 14ರಂದು ಬೆಳಿಗ್ಗೆ ಮುಕ್ಕಲ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿದ ಅವರು, ಅಲ್ಲಿನ ಮೂಲ ಸೌಕರ್ಯಗಳು, ಸ್ವಚ್ಛತೆ ಹಾಗೂ ಆರೋಗ್ಯ ಸೇವೆಗಳ ಕುರಿತು ಪರಿವೀಕ್ಷಣೆ ನಡೆಸಿ ಸಿಬ್ಬಂದಿಯೊಂದಿಗೆ ಸಂವಾದ ನಡೆಸಿದರು.

ಬಳಿಕ ಕಲಘಟಗಿ ಪಟ್ಟಣದಲ್ಲಿರುವ ಅಕ್ಕ ಕೆಫೆಗೆ ಭೇಟಿ ನೀಡಿ, ಆಹಾರ ತಯಾರಿ-ಕೆ, ಸ್ವಚ್ಛತೆ ಹಾಗೂ ನೈರ್ಮಲ್ಯ ಕುರಿತು ಸಿಬ್ಬಂದಿಯಿಂದ ಮಾಹಿತಿ ಪಡೆದುಕೊಂಡರು.



ನಂತರ ಮುಕ್ಕಲ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅರಿವು ಕೇಂದ್ರ (ಡಿಜಿಟಲ್ ಲೈಬ್ರರಿ) ಪರಿಶೀಲಿಸಿದ ಅವರು, ಬೇಸಿಗೆ ಕಾರ್ಯಕ್ರಮಗಳ ವೇಳಾಪಟ್ಟಿಯಂತೆ ನಡೆಯು ತ್ತಿರುವ ಚಟುವಟಿಕೆಗಳ ಕುರಿತು ಮಕ್ಕಳೊಂದಿಗೆ ಮಾತುಕತೆ ನಡೆಸಿದರು. ಮಕ್ಕಳ ಏಕಪಾತ್ರಾಭಿನಯ, ಕಿರುಚಿತ್ರ, ನಾಟಕ ಹಾಗೂ ನೃತ್ಯ ಕಾರ್ಯಕ್ರಮಗಳನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

ಮಧ್ಯಾಹ್ನ ಕಲಘಟಗಿ ತಾಲೂಕು ಪಂಚಾಯತ್ ಸಭಾಭವನದಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆ ಸೇರಿದಂತೆ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

ಸಭೆಯಲ್ಲಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಪರಶುರಾಮ ಸಾವಂತ, ಸಹಾಯಕ ನಿರ್ದೇಶಕ (ಗ್ರಾ.ಉ) ಗಿರೀಶ ಕೋರಿ, ಸಹಾಯಕ ನಿರ್ದೇಶಕಿ (ಪಂ.ರಾ) ಸುಮಾ ನಾರಾಯಣ ಸೇರಿದಂತೆ ವಿವಿಧ ಇಲಾಖೆಗಳ ಅನುಷ್ಠಾನಾಧಿಕಾರಿಗಳು, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ನರೇಗಾ ಸಿಬ್ಬಂದಿ ಭಾಗವಹಿಸಿದ್ದರು.

### ಮೇ 16ರಿಂದ 18ರವರೆಗೆ ವಿಜಯ ಕಲಾಮಂದಿರ ಆರ್ಟ್ ಗ್ಯಾಲರಿಯಲ್ಲಿ ಕಲಾಸಂಭ್ರಮ

# ಇಂದಿನಿಂದ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನ



■ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರ ಧನಸಹಾಯದೊಂದಿಗೆ ಕಲಾವಿದ ನವೀನ್ ಪತ್ತಾರ ಅವರ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನವನ್ನು ನಗರದ ವಿಜಯ ಕಲಾಮಂದಿರ ಸಂಸ್ಥೆಯ ಕಲಾಮಹರ್ಷಿ ಟಿ.ಪಿ. ಅಕ್ಕಿ ಆರ್ಟ್ ಗ್ಯಾಲರಿಯಲ್ಲಿ ಮೇ 16ರಿಂದ 18ರವರೆಗೆ ಹಮ್ಮಿಕೊಳ್ಳಲಾಗಿದೆ.

ವಿಜಯ ಕಲಾಮಂದಿರ, ಕಲಾಮಂದಿರ ರಸ್ತೆ, ಗದಗದಲ್ಲಿ ನಡೆಯಲಿರುವ ಈ ಚಿತ್ರಕಲಾ ಪ್ರದರ್ಶನವನ್ನು ಮೇ 16ರಂದು ಬೆಳಿಗ್ಗೆ 11 ಗಂಟೆಗೆ ಗುರು ಪಂಚಾಕ್ಷರಿ ಗುರುವರ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಉದ್ಘಾಟಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಿಜಯ ಕಲಾಮಂದಿರ ಸಂಸ್ಥೆಯ ಕಾರ್ಯದರ್ಶಿ ಪ್ರಕಾಶ್ ಟಿ. ಅಕ್ಕಿ ವಹಿಸಲಿದ್ದು, ವಿಜಯ ಕಲಾಮಂದಿರ ಚಿತ್ರಕಲಾ ಮಹಾವಿದ್ಯಾಲಯದ ಪ್ರಾಚಾರ್ಯ ಕೃಷ್ಣ ಕೆ.ಎಂ. ಹಾಗೂ ಪ್ರಾಚಾರ್ಯ ಡಾ. ಬಿ.ಎಲ್. ಚವ್ಹಾಣ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ನಗರದ ಕಲಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪ್ರದರ್ಶನವನ್ನು ವೀಕ್ಷಿಸುವಂತೆ ಕಲಾವಿದ ನವೀನ್ ಪತ್ತಾರ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

### ಅಂಬೇಡ್ಕರ್-ಬಸವಣ್ಣ-ಶಿವಾಜಿ ಜಯಂತ್ಯುತ್ಸವದಲ್ಲಿ ಏಕತೆ, ಮಾನವೀಯತೆ ಸಂದೇಶ

# ಸಾಮರಸ್ಯವೇ ರಾಷ್ಟ್ರಶಕ್ತಿಗೆ ಅಡಿಗಲ್ಲು

■ವಿಜಯಸಾಕ್ಷಿ ಸುದ್ದಿ, ಗದಗ

ದ್ವೇಷ, ಸಂಘರ್ಷ ಮತ್ತು ಯುದ್ಧದಿಂದ ಸಮಾಜದ ಅಭಿವೃದ್ಧಿ ಸಾಧ್ಯವಿಲ್ಲ. ಪರಸ್ಪರ ಮಾತುಕತೆ, ಸೌಹಾರ್ದತೆ ಹಾಗೂ ಸಾಮರಸ್ಯದ ಬದುಕಿನಿಂದ ಮಾತ್ರ ಮನ, ಮನೆ ಮತ್ತು ದೇಶವನ್ನು ಕಟ್ಟಲು ಸಾಧ್ಯ ಎಂದು ಬಳ್ಳಾರಿಯ ಸಹಪ್ರಾಂತ ಕಾರ್ಯವಾಹ ವಕ್ತಾರ ಟಿ. ಪ್ರಸನ್ನ ಹೇಳಿದರು.

ನಗರದ ಸೇವಾಚೇತನ ಸಭಾಂಗಣದಲ್ಲಿ ಸಾಮಾಜಿಕ ಸಾಮರಸ್ಯ ವೇದಿಕೆ ವತಿಯಿಂದ ಆಯೋಜಿಸಿದ್ದ ಡಾ. ಬಾಬಾಸಾಹೇಬ ಅಂಬೇಡ್ಕರ್, ವಿಶ್ವಗುರು ಶ್ರೀ ಬಸವಣ್ಣ ಹಾಗೂ ಛತ್ರಪತಿ ಶಿವಾಜಿ ಮಹಾರಾಜರ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಅವರು, ಸಮಾಜದಲ್ಲಿ ಮೇಲು-ಕೀಳು, ಬಡತನ-ಸಿರಿತನ, ಅಕ್ಷರಸ್ಥ-ಅನಕ್ಷರಸ್ಥ ಎಂಬ ಭೇದಕ್ಕಿಂತ ಮಾನವೀಯ ಮೌಲ್ಯಗಳು ಮುಖ್ಯವಾಗಿವೆ ಎಂದರು.

ವೈಚಾರಿಕತೆ ಬೆಳೆಸುವ ಶಿಕ್ಷಣ, ಮಾನವೀಯ ಗುಣಗಳನ್ನು ಗಟ್ಟಿಗೊಳಿಸುವ ಸಂಬಂಧಗಳು ಹಾಗೂ "ನಾವೆಲ್ಲರೂ ಸಮಾನರು" ಎಂಬ ಭಾವನೆ ಸಮಾಜದಲ್ಲಿ ನಿರ್ಮಾಣವಾದಾಗ ಮಾತ್ರ ಭಾರತ ಇನ್ನಷ್ಟು ಬಲಿಷ್ಠ ರಾಷ್ಟ್ರವಾಗಿ ಹೊರಹೊಮ್ಮಲು ಸಾಧ್ಯ ಎಂದು ಹೇಳಿದರು.



ಡಾ. ಬಾಬಾಸಾಹೇಬ ಅಂಬೇಡ್ಕರ್, ವಿಶ್ವಗುರು ಶ್ರೀ ಬಸವಣ್ಣ ಹಾಗೂ ಛತ್ರಪತಿ ಶಿವಾಜಿ ಮಹಾರಾಜರು ಸಮಸಮಾಜ ನಿರ್ಮಾಣ, ಮಾನವೀಯತೆ ಹಾಗೂ ದೇಶದ ಏಕತೆಗಾಗಿ ಶ್ರಮಿಸಿದ ಮಹಾನ್ ಚೇತನರು. ಅವರ ವಿಚಾರಧಾರೆಗಳನ್ನು ಕಾರ್ಯರೂಪಕ್ಕೆ ತರುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವ ಎಂದು ಅಭಿಪ್ರಾಯಪಟ್ಟರು.

12ನೇ ಶತಮಾನದಲ್ಲೇ ಅನುಭವ ಮಂಟಪದ ಮೂಲಕ ಸಮಾನತೆ ಹಾಗೂ ವಿಶ್ವಬಂಧುತ್ವದ ಸಂದೇಶ ಸಾರಿದ ಬಸವಣ್ಣ ಇಂದಿಗೂ ಪ್ರಸ್ತುತವಾಗಿದ್ದಾರೆ. ಅಸ್ಪೃಶ್ಯತೆಯಿಂದ ತುಳಿತಕ್ಕೊಳಗಾದವರಿಗೆ ಸ್ವಾಭಿಮಾನ ತುಂಬಿದ ಡಾ. ಅಂಬೇಡ್ಕರ್ ಶಿಕ್ಷಣ ಮತ್ತು ಸಂಸ್ಕಾರದ ಮೂಲಕ ಸಾಮಾಜಿಕ ಜಾಗೃತಿ ಮೂಡಿಸಿದ ಮಹಾನ್ ದಾರ್ಶನಿಕರಾಗಿದ್ದರು. ಛತ್ರಪತಿ ಶಿವಾಜಿ ಮಹಾರಾಜರು ಅಪ್ರತಿಮ ದೇಶಭಕ್ತರಾಗಿದ್ದರು ಎಂದು ಬಣ್ಣಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನೀರಾವರಿ ಇಲಾಖೆಯ ನಿವೃತ್ತ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಎಂ.ಜಿ. ಸಂತೋಜಿ ಮಾತನಾಡಿ, ಜಾತಿ-ಧರ್ಮ, ಬಡವ-ಶ್ರೀಮಂತ ಎಂಬ ಭೇದ ಮರೆತು ದೇಶದ ಐಕ್ಯತೆಗೆ ಎಲ್ಲರೂ ಬದ್ಧರಾಗಬೇಕು ಎಂದರು.

> "ಅಂಬೇಡ್ಕರ್ ಸಮಾನತೆ ಕಲಿಸಿದರು... ಬಸವಣ್ಣ ಮಾನವೀಯತೆ ಬಿತ್ತಿದರು... ಶಿವಾಜಿ ದೇಶಭಕ್ತಿ ಜಾಗೃತಗೊಳಿಸಿದರು; ಅವರ ವಿಚಾರಗಳೇ ಭಾರತದ ನಿಜವಾದ ಶಕ್ತಿ."
> – **ಟಿ. ಪ್ರಸನ್ನ,** ಬಳ್ಳಾರಿಯ ಸಹಪ್ರಾಂತ ಕಾರ್ಯವಾಹ ವಕ್ತಾರ

ರವಿಕಾಂತ ಅಂಗಡಿ ಸ್ವಾಗತಿಸಿದರು. ವಿಜಯಲಕ್ಷ್ಮಿ ಪ್ರಾರ್ಥಿಸಿದರು. ಸಾಮಾಜಿಕ ಸಾಮರಸ್ಯ ವೇದಿಕೆಯ ಸಂಯೋಜಕ ಹನುಮಂತ ಎನ್. ಕಾಳೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರೊ. ಮಾರುತಿ ಕಟ್ಟಿಮನಿ ನಿರೂಪಿಸಿದರು. ಡಾ. ಪ್ರಕಾಶ ಹೊಸಮನಿ ವಂದಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ನ್ಯಾಯವಾದಿ ಸುಧೀರಸಿಂಹ ಘೋರ್ಪಡೆ, ಶ್ರೀಪತಿ ಉಡುಪಿ, ಡಾ. ಉಮೇಶ್ ಹಾದಿ, ಬಸವರಾಜ ನಾಗಲಾಪೂರ, ಸಂತೋಷ ಅಕ್ಕಿ, ನಾಗವೇಣಿ ಕಟ್ಟಿಮನಿ, ರಮೇಶ್ ಸಜ್ಜಗಾರ, ನರಸಿಂಹ ಕಾಮಾರ್ತಿ, ಚೇತನ ಮೇರವಾಡೆ, ಸಿ.ಬಿ. ಸೊನ್ನದ, ಮಲ್ಲು ನಾಗಲಾಪೂರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka